ವಿಜಯಪುರ | ಸಂಪುಟ 01 | ಸಂಚಿಕೆ 293 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com | Title Code: KARKAN28047 | ಬುಧವಾರ, ಜನವರಿ 17, 2024

“ಸಿದ್ದರಾಮಯ್ಯ ಮೋದಿ ಅವರನ್ನ ಏಕವಚನದಲ್ಲಿ ಮಾಸ್ ಮರ್ಡರ್ ಎಂದು ಕರೆದರು. ಕಾಂಗ್ರೆಸ್ ನವರಿಗೆ, ಸಿದ್ದರಾಮಯ್ಯ ಅವರಿಗೆ ಇಲ್ಲದ ಸಭ್ಯತೆ ಬಿಜೆಪಿಯವರಿಗ್ಯಾಕೆ? ಇದು ನನ್ನ ಪ್ರಧಾನಿ, ನನ್ನ ದೇಶ, ನನ್ನ ಧರ್ಮದ ಬಗ್ಗೆ ಹೇಳಿರುವ ಹೇಳಿಕೆಯಲ್ಲಿ ಯಾವುದೇ ಹಿಂಜರಿಕೆ ಇಲ್ಲ.”



– ಅನಂತಕುಮಾರ ಹೆಗಡೆ
ಸಂಸದರು, ಉತ್ತರ ಕನ್ನಡ

### ಬಿಜೆಪಿಯ ಚುನಾವಣಾ ರಾಜಕೀಯ ಲಾಭದ ಯೋಜನೆ ಆರೋಪ । ಕಾಂಗ್ರೆಸ್ ನಾಯಕರಿಂದ ಆಹ್ವಾನ ತಿರಸ್ಕಾರ

# ರಾಮಮಂದಿರ ಉದ್ಘಾಟನೆ ಮೋದಿ ಕಾರ್ಯಕ್ರಮ :ರಾಹುಲ್ ಗಾಂಧಿ

ದೆಹಲಿ: ಅಯೋಧ್ಯೆಯಲ್ಲಿ ನಡೆಯುವ ರಾಮಮಂದಿರ ಉದ್ಘಾಟನಾ ಸಮಾರಂಭ’ ಮೋದಿಯವರ ಕಾರ್ಯಕ್ರಮ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಪ್ರಧಾನಿ ವಿರುದ್ಧ ಕಿಡಿಕಾರಿದ್ದಾರೆ.

ಭಾರತ್ ಜೋಡೋ ನ್ಯಾಯ ಯಾತ್ರೆಯ ನಡುವೆ ಸುದ್ದಿಗಾರರೊಂದಿಗೆ ಮಂಗಳವಾರ ಮಾತನಾಡಿದ ರಾಹುಲ್ ಗಾಂಧಿ, ಆರ್‌ಎಸ್‌ಎಸ್ ಮತ್ತು ಬಿಜೆಪಿ ಜನವರಿ 22ರ ಕಾರ್ಯಕ್ರಮವನ್ನು ನರೇಂದ್ರ ಮೋದಿ ಕಾರ್ಯಕ್ರಮವನ್ನಾಗಿ ರಾಜಕೀಯ ಮಾಡುತ್ತಿದೆ. ಇದು ಆರ್-ಎಸ್‌ಎಸ್ ಬಿಜೆಪಿ ಕಾರ್ಯವಾಗಿದೆ. ಅದಕ್ಕಾಗಿಯೇ ಕಾಂಗ್ರೆಸ್ ಅಧ್ಯಕ್ಷರು ಫಂಕ್ಷನ್‌ಗೆ ಹೋಗಲ್ಲ ಎಂದು ಹೇಳಿದರು ಎಂದು ನಾನು ಭಾವಿಸುತ್ತೇನೆ ಎಂದು ಹೇಳಿದ್ದಾರೆ.



ನಾವು ಎಲ್ಲಾ ಧರ್ಮಗಳು, ಎಲ್ಲಾ ಆಚರಣೆಗಳಿಗೆ ಮುಕ್ತವಾಗಿದ್ದೇವೆ. ಹಿಂದೂ ಧರ್ಮದ ದೊಡ್ಡ ದೊಡ್ಡ ಅಧಿಕಾರಿಗಳು ಸಹ ಜನವರಿ 22ರ ಸಮಾರಂಭದ ಬಗ್ಗೆ ಅವರು(ಮೋದಿ) ಏನು ಯೋಚಿಸುತ್ತಾರೆ ಎಂಬುದರ ಕುರಿತು ತಮ್ಮ ಅಭಿಪ್ರಾಯವನ್ನು ಸಾರ್ವಜನಿಕವಾಗಿ ಬಹಿರಂಗಪಡಿಸಿದ್ದಾರೆ, ಇದು ರಾಜ-ಕೀಯ ಕಾರ್ಯವಾಗಿದೆ ಎನ್ನುವುದು ಎಲ್ಲರಿಗೂ ತಿಳಿದಿದೆ” ಎಂದು ರಾಹುಲ್ ಗಾಂಧಿ ಹೇಳಿದರು.

ಆದ್ದರಿಂದ ಭಾರತದ ಪ್ರಧಾನ ಮಂತ್ರಿಯ ಸುತ್ತ ವಿನ್ಯಾಸಗೊಳಿಸಲಾದ ಮತ್ತು ಆರ್‌ಎಸ್‌ಎಸ್ ಸುತ್ತಲೂ ವಿನ್ಯಾಸಗೊಳಿಸಲಾದ ರಾಜಕೀಯ ಕಾರ್ಯಕ್ರಮಕ್ಕೆ ಹೋಗುವುದು ನಮಗೆ ಕಷ್ಟ” ಎಂದು ಅವರು ಹೇಳಿದರು.

ಇದೇ ಕಾರಣಕ್ಕೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪಕ್ಷದ ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಮತ್ತು ಲೋಕಸಭೆಯ ಪಕ್ಷದ ನಾಯಕ ಅಧೀರ್ ರಂಜನ್ ಚೌಧರಿ ಅವರು ಜನವರಿ 22ರಂದು ಅಯೋಧ್ಯೆಯಲ್ಲಿ ಶಂಕುಸ್ಥಾಪನೆ ಸಮಾರಂಭದ ಆಹ್ವಾನವನ್ನು ತಿರಸ್ಕರಿಸಿದ್ದಾರೆ. ಬಿಜೆಪಿ ಇದನ್ನು ಚುನಾವಣಾ ರಾಜಕೀಯ ಲಾಭದ ಯೋಜನೆಯನ್ನಾಗಿ ಮಾಡಿದೆ ಎಂದು ಅವರು ಆರೋಪಿಸಿದ್ದಾರೆ.

### ವ್ಯವಸ್ಥಿತ ನಿರ್ವಹಣೆಗೆ ನೋಡಲ್ ಅಧಿಕಾರಿಗಳನ್ನು ನೇಮಿಸಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಆದೇಶ

# ಸಂವಿಧಾನ ಜಾಗೃತಿ ಜಾಥಾ ಸ್ತಬ್ಧಚಿತ್ರಕ್ಕೆ ಜ.26ರಂದು ಚಾಲನೆ

ಉದಯರಶ್ಮಿ ನ್ಯೂಸ್

ವಿಜಯಪುರ: ಸಂವಿಧಾನ ದಿನಾಚರಣೆ ಅಂಗವಾಗಿ ಸಂವಿಧಾನ ಜಾಗೃತಿ ಜಾಥಾದ ರಾಷ್ಟ್ರೀಯ ಮಟ್ಟದ ಕಾರ್ಯಕ್ರಮಕ್ಕೆ ಎಲ್ಲ ಜಿಲ್ಲಾ ಕೇಂದ್ರಗಳ ಮೂಲಕ ಚಾಲನೆ ನೀಡಲು ಉದ್ದೇಶಿಸಲಾಗಿರುವ ಜಾಗೃತಿ ಜಾಥಾದ ಸ್ತಬ್ಧ ಚಿತ್ರಕ್ಕೆ ಜಿಲ್ಲೆಯಲ್ಲಿ ಜನವರಿ 26 ರಂದು ನಗರದ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಚಾಲನೆ ನೀಡಲಿದ್ದಾರೆ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕೆಸ್ವಾನ್ ಕಚೇರಿ ಸಭಾಂಗಣದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಜಿಲ್ಲೆಯ ವಿವಿಧ ಅಧಿಕಾ-ರಿಗಳೊಂದಿಗೆ ಭಾರತದ ಸಂವಿಧಾನ ಮತ್ತು ಏಕತೆ ಕಾರ್ಯಕ್ರಮವನ್ನು ಆಚ-’ರಿಸುವ ಕುರಿತು ಪ್ರಸ್ತಾಪಿಸಲು ಹಾಗೂ ಏಕಕಾಲದಲ್ಲಿ ರಾಜ್ಯದ 31 ಜಿಲ್ಲೆಗಳಲ್ಲಿ ಆಚರಿಸುವ ಸಂವಿಧಾನ ಜಾಗೃತಿ ಜಾಥಾ ಸ್ತಬ್ಧಚಿತ್ರದ ಮೆರವಣಿಗೆಗೆ ಹಮ್ಮಿಕೊಂಡಿದ್ದು, ಜಿಲ್ಲೆಯಲ್ಲಿ ಎರಡೂ ಸ್ತಬ್ಧಚಿತ್ರಗಳು ಜಿಲ್ಲೆಯಾದ್ಯಂತ 27 ದಿನಗಳ ಕಾಲ ಸಂಚರಿಸಲಿವೆ. ಜನವರಿ 26 ರಿಂದ ಫೆಬ್ರವರಿ 23ರವರೆಗೆ ಸ್ತಬ್ಧಚಿತ್ರ ಜಿಲ್ಲೆಯಾದ್ಯಂತ ಸಂಚರಿಸಿ, ಫೆ.23ರಂದು ಬೆಂಗಳೂರಿಗೆ ಎರಡೂ ಸ್ತಬ್ಧಚಿತ್ರಗಳು ತಲುಪಲಿವೆ. ಒಂದು ವಿಜಯಪುರದಿಂದ ಹಾಗೂ ಇನ್ನೊಂದು ಇಂಡಿಯಿಂದ ಸ್ತಬ್ಧಚಿತ್ರ ಸಂಚರಿಸಲಿದೆ. ಜಿಲ್ಲೆಯ 13 ತಾಲೂಕಿನ 211 ಗ್ರಾಮ ಪಂಚಾಯತಿ ಹಾಗೂ ಪಟ್ಟಣ ಪಂಚಾಯತಿ ಪುರಸಭೆ ವ್ಯಾಪ್ತಿಗಳಲ್ಲಿ ಸ್ತಬ್ಧಚಿತ್ರ ಸಂಚರಿಸಲಿವೆ ಎಂದು ಹೇಳಿದರು.



ಸಂವಿಧಾನ ಜಾಗೃತಿ ಜಾಥಾ ಸ್ತಬ್ಧಚಿತ್ರಗಳ ಮೆರವಣಿಗೆಗೆ ಸಂಬಂಧಿಸಿದಂತೆ ವಿಜಯಪುರ ತಾಲೂಕಿಗೆ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎನ್.ಕೆ.ಗೋಠೆ (ಮೊ:9480857004), ಬಬಲೇಶ್ವರ ತಾಲೂಕಿಗೆ ಕೃಷಿ ಇಲಾಖೆ ಉಪನಿರ್ದೇಶಕ ಪ್ರಕಾಶ ಚವ್ಹಾಣ (ಮೊ:8277930602), ತಿಕೋಟಾ ತಾಲೂಕಿಗೆ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಸಿ.ಬಿ.ದೇವರಮನಿ, ಇಂಡಿ ತಾಲೂಕಿಗೆ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಮ ವಿಜಯಕುಮಾರ ಮೆಕ್ಕಳಕಿ, ಚಡಚಣ ತಾಲೂಕಿಗೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಸಿ.ಬಿ.ಕುಂಬಾರ ಹಾಗೂ ಸಿಂದಗಿ ತಾಲೂಕಿಗೆ ಆಹಾರ ಮತ್ತು ನಾಗರಿಕರ ಸರಬರಾಜು ಇಲಾಖೆ ಉಪನಿರ್ದೇಶಕ ವಿನಯ ಪಾಟೀಲ ಅವರನ್ನು ನೇಮಕ ಮಾಡಲಾಗಿದೆ.

ದೇವರಹಿಪ್ಪರಗಿ ತಾಲೂಕಿಗೆ ಇಂಡಿ ಕೃಷಿ ಇಲಾಖೆ ಉಪನಿರ್ದೇಶಕ ಚಂದ್ರಕಾಂತ ಪವಾರ, ಆಲಮೇಲ ತಾಲೂಕಿಗೆ ಅಲ್ಪಸಂಖ್ಯಾತರ ಇಲಾಕೆ ಜಿಲ್ಲಾ ಅಧಿಕಾರಿ ಪ್ರಶಾಂತ ಪೂಜಾರಿ, ಮುದ್ದೇಬಿಹಾಳ ತಾಲೂಕಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಈರಣ್ಣ ಆಶಾಪುರ, ತಾಳಿಕೋಟೆ ತಾಲೂಕಿಗೆ ಭೂದಾಖಲೆಗಳ ಇಲಾಖೆ ಉಪನಿರ್ದೇಶಕ ಮಹಾಂತೇಶ ಮುಳಗುಂದ, ಬಸವನಬಾಗೇವಾಡಿ ತಾಲೂಕಿಗೆ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ರಾಜಶೇಖರ ಡಂಬಳ, ಕೊಲ್ಹಾರ ತಾಲೂಕಿಗೆ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎನ್.ಎಚ್.ನಾಗೂರ ಹಾಗೂ ನಿಡಗುಂದಿ ತಾಲೂಕಿಗೆ ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಡಾ.ಸಿ.ಕೆ. ಹೊಸಮನಿ ಅವರನ್ನು ನೇಮಕ ಮಾಡಲಾಗಿದ್ದು, ಎರಡೂ ಸ್ತಬ್ಧ ಚಿತ್ರಗಳು ವ್ಯವಸ್ಥಿತವಾಗಿ ಸಂಚರಿಸಲು ನಿರ್ವಹಣೆಗಾಗಿ ತಾಲೂಕಾವಾರು ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದ್ದು, ತಾಲೂಕಾ ಮಟ್ಟದಲ್ಲಿ ಸಂಬಂಧಿಸಿದ ತಹಶೀಲ್ದಾರರು ಹಾಗೂ ತಾಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಿಕೊಳ್ಳುವಂತೆ ಸೂಚಿಸಿದರು.

### ರಾಜ ನುಡಿ

ಬಹುತೇಕರು ನಾವು ನಮ್ಮ ಮುಖವನ್ನು ಕನ್ನಡಿಯಿಂದ ಅರಿತಿರುತ್ತೇವೆಯೇ ಹೊರತು ಆಂತರ್ಯದಿಂದಲ್ಲ. ಸಾಗರದ ಮಧ್ಯದ ಮೌನ ದ್ವೀಪದಂತೆ ಬದುಕಿ ಬಾಳಲು ಆಂತಯೇ ಮುಖ್ಯ.

–ಡಾ. ರಾಜಶೇಖರ ನಾಗೂರ

### ನೈರುತ್ಯ ರೇಲ್ವೆ ವಲಯದ ಜನರಲ್ ಮ್ಯಾನೇಜರ್ ಸಂಜೀವಕಿಶೋರ ಮಾಹಿತಿ

# ವರ್ಷಾಂತ್ಯಕ್ಕೆ ರೇಲ್ವೆ ದ್ವಿಪಥಮಾರ್ಗ ಪೂರ್ಣ

ಉದಯರಶ್ಮಿ ನ್ಯೂಸ್

ಆಲಮಟ್ಟಿ: ಬದಾಮಿ, ಬಾಗಲಕೋಟೆ, ಆಲಮಟ್ಟಿ, ವಿಜಯಪುರ ನಾಲ್ಕು ರೈಲು ನಿಲ್ದಾಣಗಳನ್ನು ಅಮೃತ ರೈಲು ಯೋಜನೆಯಡಿ ಸೇ-ರಿಸಲಾಗಿದ್ದು, ಈಗಾಗಲೇ ಕಾಮಗಾರಿ ಆರಂಭಗೊಂಡಿವೆ. ವಿಜಯಪುರ-ಬಾಗಲಕೋಟೆ ರೈಲು ನಿಲ್ದಾಣದ ಆಧುನೀಕರಣ ಮುಕ್ತಾಯ ಹಂತಕ್ಕೆ ಬಂದಿವೆ ಎಂದು ನೈರುತ್ಯ ರೇಲ್ವೆ ವಲಯದ ಜನರಲ್ ಮ್ಯಾನೇಜರ್ ಸಂಜೀವಕಿಶೋರ ಹೇಳಿದರು.

ಆಲಮಟ್ಟಿಯ ರೈಲು ನಿಲ್ದಾಣಕ್ಕೆ ಮಂಗಳವಾರ ಸಂಜೆ ಭೇಟಿ ನೀಡಿ ಅಲ್ಲಿ ನಡೆಯುತ್ತಿರುವ ಅಮೃತ ರೈಲು ನಿಲ್ದಾಣದ ಕಾಮಗಾರಿ, ದ್ವಿಪಥ ರೈಲು ಮಾರ್ಗ ನಿರ್ಮಾಣ ಕಾಮಗಾರಿ ಪರಿಶೀಲಿಸಿ ಅವರು ಮಾತನಾಡಿದರು. ಇದರಿಂದ ಪ್ರಯಾಣಿಕರಿಗೆ ಸಾಕಷ್ಟು ಅನುಕೂಲವಾಗಲಿದೆ ಎಂದರು.

ಗದಗ-ಹೊಟಗಿ ಮಾರ್ಗದ ರೈಲ್ವೆ ಡಬಲಿಂಗ್ ಕಾರ್ಯ ಬಹುತೇಕ ಪೂರ್ಣಗೊಂಡಿದೆ. ಬಾಗಲಕೋಟೆ-ವಂದಾಲ ಮಧ್ಯೆ ಮಾತ್ರ ಬಾಕಿಯಿದೆ. ಆಲಮಟ್ಟಿ-ಬಾಗಲಕೋಟೆ ಮಧ್ಯೆ ಮೇ-2024 ಕ್ಕೆ ಪೂರ್ಣಗೊಳ್ಳಲಿದೆ, ಆಲಮಟ್ಟಿ-ವಂದಾಲ ಮಧ್ಯೆ ಬರುವ ಕೃಷ್ಣಾ ನದಿಯ ಸೇತುವೆ ಕಾಮಗಾರಿ ನಡೆದಿದೆ. ಅದು ಬಹುತೇಕ ಡಿಸೆಂಬರ್ ಅಂತ್ಯಕ್ಕೆ ಪೂರ್ಣಗೊಳ್ಳಲಿದೆ ಎಂದರು. ಆಲಮಟ್ಟಿ-ಗದಗ ಮಧ್ಯೆ ಎಲೆಕ್ಟ್ರಿಫಿಕೇಶನ್ ಕಾಮಗಾರಿಯೂ ಜೂನ್-2024 ಕ್ಕೆ ಪೂರ್ಣಗೊಳ್ಳಲಿದೆ ಎಂದರು.

ಆಲಮಟ್ಟಿಯಲ್ಲಿ ಮೂರು ಎಕ್ಸ್ ಪ್ರೆಸ್ ರೈಲು ನಿಲುಗಡೆಗೆ ರೈಲು ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಅಲ್ಲಿಂದ ಅನುಮತಿ ಬಂದ ನಂತರ ರೈಲು ನಿಲುಗಡೆಗೆ ಕ್ರಮ ಕೈಗೊಳ್ಳಲಾಗುವುದು ಎಂದರು.



ವಿಜಯಪುರ ರೈಲು ನಿಲ್ದಾಣದಲ್ಲಿ ಫಿಟ್ ಲೈನ್ ನಿರ್ಮಿಸಿ, ಅಲ್ಲಿ ಈ ಭಾಗದಲ್ಲಿ ಸಂಚರಿಸುವ ರೈಲುಗಳ ದುರಸ್ತಿ ಹಾಗೂ ನಿರ್ವಹಣೆ ಮತ್ತು ಹೊಸ ರೈಲುಗಳ ನಿರ್ವಹಣೆಯ ಕಾರ್ಯ ನಡೆಯಲಿದೆ. ಈ ಫಿಟ್ ಲೈನ್ ನಿರ್ಮಾಣದ ನಂತರ ಈ ಭಾಗದಲ್ಲಿ ರೈಲುಗಳ ಸಂಚಾರ ಹೆಚ್ಚಲಿದೆ ಎಂದರು.


ಆಲಮಟ್ಟಿ-ಯಾದಗೀರ ಹಾಗೂ ಆಲಮಟ್ಟಿ-ಚಿತ್ರದುರ್ಗ ನೂತನ ರೈಲು ಮಾರ್ಗ ನಿರ್ಮಾಣದ ಸಮೀಕ್ಷೆ ಕಾರ್ಯ ಇನ್ನೂ ಪೂರ್ಣಗೊಂಡಿಲ್ಲ. ಸಮೀಕ್ಷೆ ಪೂರ್ಣಗೊಂಡ ನಂತರ ರೈಲು ಮಂಡಳಿಗೆ ಕಳುಹಿಸಲಾಗುವುದು ಎಂದು ಸಂಜೀವ ಕಿಶೋರ ತಿಳಿಸಿದರು.

ಈ ಸಂದರ್ಭದಲ್ಲಿ ಹುಬ್ಬಳ್ಳಿ ರೈಲ್ವೆ ಡಿವಿಷನಲ್ ಮ್ಯಾನೇಜರ್ ಹರ್ಷ ಖರೆ, ಪ್ರಿನ್ಸಿಪಲ್ ಚೀಫ್ ಕಮರ್ಷಿಯಲ್ ಮ್ಯಾನೇಜರ್ ಎಸ್.ಪಿ.ಶಾಸ್ತ್ರಿ, ಮುಖ್ಯ ಆಡಳಿತಾಧಿಕಾರಿ ರಾಮಗೋಪಾಲ, ಬ್ರಹ್ಮಾನಂದಮ್, ವಿನಯಕುಮಾರ ಅಗರವಾಲ, ಸಂತೋಷ ಹೆಗಡೆ ಮತ್ತೀತರರು ಇದ್ದರು.

### ಗ್ರಾಮಸ್ಥರ ಮನವಿ

ಆಲಮಟ್ಟಿ ಸಂತೆ ಮಾರುಕಟ್ಟೆ ಕಡೆಯಿಂದ ಆಲಮಟ್ಟಿ ರೈಲು ನಿಲ್ದಾಣದ ಹೊರಬಾಜು ಬರಲು ಅಂಡರ್ ಪಾಸ್ ನಿರ್ಮಿಸಬೇಕು, ಆಲಮಟ್ಟಿಯಲ್ಲಿ ಎಲ್ಲಾ ರೈಲುಗಳನ್ನು ನಿಲ್ಲಿಸಬೇಕು ಎಂದು ಆಲಮಟ್ಟಿ ಗ್ರಾಮಸ್ಥರು ರೈಲ್ವೆ ಜನರಲ್ ಮ್ಯಾನೇಜರ್ ಸಂಜೀವಕಿಶೋರ ಅವರಿಗೆ ಮನವಿ ಸಲ್ಲಿಸಿದರು. ಗ್ರಾಮಸ್ಥರಾದ ರಮೇಶ ಆಲಮಟ್ಟಿ, ಶಂಕರ ಜಲ್ಲಿ, ಮಂಜುನಾಥ ಹಿರೇಮಠ, ಧೀರಜ್ ರಾಠಿ, ಕೃಷ್ಣಮೂರ್ತಿ ಕೋಳಿ, ಶಿವಾನಂದ ಕೋಳಿ, ಮಹಾಂತೇಶ ಹಿರೇಮಠ, ಭೀಮಣ್ಣ ಪತ್ತಾರ ಮತ್ತೀತರರು ಇದ್ದರು.

### ವಚನ ಚಿಂತನ 279



*ಮಹಾಲಿಂಗದ ಅರಿವಿಗೆ ಇಷ್ಟಲಿಂಗ*

*ಇಷ್ಟಲಿಂಗ ಪೂಜೆಯದು*
*ಅಷ್ಟೈಶ್ವರ್ಯಪ್ರದವಾಯಿತ್ತು.*
*ಪ್ರಾಣಲಿಂಗ ಪೂಜೆಯದು ಅಖಂಡ*
*ಚಿದೈಶ್ವರ್ಯಪ್ರದವಾಯಿತ್ತು.*
*ಭಾವಲಿಂಗ ಪೂಜೆಯದು ನಿರ್ಭಾವ*
*ನಿಜಾನಂದ ವಸ್ತುಸ್ವರೂಪವಾಯಿತ್ತು,*
*ಕೇಳಾ, ಕಪಿಲಸಿದ್ಧಮಲ್ಲಿಕಾರ್ಜುನಾ.*
*– ಸಿದ್ಧರಾಮೇಶ್ವರರು*

ಇಷ್ಟಲಿಂಗ ಪ್ರಾಣಲಿಂಗ ಮತ್ತು ಭಾವಲಿಂಗ ಪೂಜೆಯಿಂದ ಪಡೆಯುವ ಅನುಭಾವದ ಅನುಭೂತಿಯನ್ನು ಇಲ್ಲಿ ವಿವರಿಸಲಾಗಿದೆ, ಇಷ್ಟಲಿಂಗವೆನ್ನುವುದು ಸಾಕಾರ ಸ್ವರೂಪ ಇದರ ಮೂಲಕ ಅಂಗತೃಪ್ತಿಗೆ ಬೇಕಾಗುವ ಅಷ್ಟೈಶ್ವರ್ಯಗಳು ದೊರಕುತ್ತವೆ. ಪ್ರಾಣಲಿಂಗವೆನ್ನುವುದು ಅಂಗದೊಳಗೆ ಅಡಗಿರುವ ಚೈತನ್ಯ ಇದರ ಪೂಜೆಯಿಂದ ನಿರಾಕಾರ ಚೈತನ್ಯವು ಬೆಳಗಿನರೂಪದ ಚಿದೈಶ್ವರ್ಯಪ್ರಾಪ್ತವಾಗುತ್ತದೆ. ಪ್ರಾಣಲಿಂಗವನ್ನೆಲ್ಲ ಒಳಗೊಂಡಿರುವ ಜಗದಚೈತನ್ಯ ಮಹಾಲಿಂಗದ ಪ್ರತಿ-ಕವಾದ ಭಾವಲಿಂಗದ ಪೂಜೆಯಿಂದ ವರ್ಣನಾತೀತವಾದ ನಿಜಾನಂದವು ಪ್ರಪ್ತಿಯಾಗುವುದಾಗಿ ಸಿದ್ಧರಾಮೇಶ್ವರರು ತಿಳಿಸುತ್ತ ಮಹಾಲಿಂಗದ ಅರಿವಿಗೆ ಇಷ್ಟಲಿಂಗವೇ ಕಾರಣವೆನ್ನುತ್ತ ಅದರ ಮಹತ್ವವನ್ನು ತಿಳಿಸಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

### ಶ್ರೀ ಸಿದ್ದೇಶ್ವರ ಜಾನುವಾರು ಜಾತ್ರಾ ಮಹೋತ್ಸವದ ಸಮಾರಂಭದಲ್ಲಿ ಶಾಸಕ ಬಸನಗೌಡ ಯತ್ನಾಳ ಅಭಿಮತ

# ಗೋ ಸಂಪತ್ತು ಉಳಿಸಲು ಜೋಳಕ್ಕೆ ಬೆಂಬಲ ಬೆಲೆ ಅತ್ಯಗತ್ಯ

ಉದಯರಶ್ಮಿ ನ್ಯೂಸ್

ವಿಜಯಪುರ: ವೈಜ್ಞಾನಿಕ ಕಾರಣಗಳಿಂದಲೇ ಋಷಿಮುನಿಗಳು, ಹಿರಿಯರು ಆಕಳನ್ನು ಗೋಮಾತೆ ಅಂದಿದ್ದಾರೆ. ಜೋಳ ಬೆಳೆಯುವುದು ಕಡಿಮೆ ಆಗಿದ್ದರಿಂದ, ಕ್ರಮೇಣ ಗೋ ಸಂಪತ್ತು ಕಡಿಮೆ ಆಗುತ್ತಿದ್ದು, ಮುಂದಿನ ಅಧಿವೇಶನದಲ್ಲಿ ಜೋಳಕ್ಕೆ ಕನಿಷ್ಠ ಬೆಂಬಲ ಬೆಲೆ, ಕ್ವಿಂಟಲ್ ಗೆ ರೂ.5 ಸಾವಿರ ನಿಗದಿಪಡಿಸಲು ಪ್ರಯತ್ನಿಸಲಾಗುವುದು ಎಂದು ಶಾಸಕ ಬಸನಗೌಡ ರಾ.ಪಾಟೀಲ ಯತ್ನಾಳ ಹೇಳಿದರು.

ನಗರ ಮತಕ್ಷೇತ್ರ ವ್ಯಾಪ್ತಿಯ ತೊರವಿ ಸಮೀಪ ಸಿದ್ದೇಶ್ವರ ಸಂಕ್ರಮಣ ಜಾತ್ರೆ ಅಂಗವಾಗಿ ಹಮ್ಮಿಕೊಂಡಿದ್ದ ಶ್ರೀ ಸಿದ್ದೇಶ್ವರ ಜಾನುವಾರು ಜಾತ್ರಾ ಮಹೋತ್ಸವದ ಬಹುಮಾನ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.



ಸ್ವಾತಂತ್ರ್ಯ ಬಂದಾಗ ಈ ದೇಶದಲ್ಲಿ ಗಣತಿ ಪ್ರಕಾರ 120 ಕೋಟಿ ಪಶು ಸಂಪತ್ತು ಇತ್ತು. ಆಗ ಜನಸಂಖ್ಯೆ ಕೇವಲ 35 ಕೋಟಿ ಇದ್ದರೆ, ಇಂದು 150 ಕೋಟಿ ನಾವುಗಳಿದ್ದರೆ, 25 ಕೋಟಿಗೆ ಅವು ಬಂದಿವೆ. ಮೇವಿನ ಕೊರತೆಯೇ ಇದಕ್ಕೆ ಕಾರಣವಾಗಿದ್ದು, ಜೋಳ ಬೆಳೆದರೆ ಕಣಕಿ ಸಿಗುತ್ತದೆ, ಅದರಿಂದ ದನಗಳನ್ನು ಸಾಕಬಹುದು. ದನಗಳಿದ್ದರೆ ಗೊಬ್ಬರ ದೊರೆಯುತ್ತದೆ, ಜೋಳಕ್ಕೆ ಬೆಲೆ ಇಲ್ಲದ್ದರಿಂದ ಈ ಚೈನ್ ಕಳೆದುಕೊಂಡಿದ್ದು, ಮತ್ತೆ ಜೋಳ ಬೆಳೆಯಲು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಬೆಳಗಾವಿ ಅಧಿವೇಶನದಲ್ಲಿ ಜೋಳಕ್ಕೆ ಕನಿಷ್ಠ 5 ಸಾವಿರ ಘೋಷಣೆಗೆ ಧ್ವನಿ ಎತ್ತಲಾಗಿತ್ತು. ಮತ್ತೆ ಬೆಂಗಳೂರು ಅಧಿವೇಶನದಲ್ಲಿ ಯಾವುದೇ ಪರಿಸ್ಥಿತಿಯಲ್ಲಿ ಘೋಷಣೆ ಮಾಡಲು ಒತ್ತಾಯಿಸಲಾಗುವುದು ಎಂದರು.

ಪ್ರತಿಯೊಬ್ಬರೂ ಗೋವಿನ ಮಹತ್ವ ತಿಳಿದು, ಸಾಕುವುದು ಮತ್ತು ರಕ್ಷಣೆಯ ಕೆಲಸ ಮಾಡಬೇಕು ಎಂದು ಹೇಳಿದರು.

ಇದೇ ವೇಳೆ ಅತ್ಯುತ್ತಮ ರಾಸುಗಳಿಗೆ 10 ಗ್ರಾಂ ಚಿನ್ನದ ಪದಕ ಮತ್ತು ಪ್ರಶಸ್ತಿ ಪತ್ರ ವಿತರಿಸಲಾಯಿತು. ಸಿದ್ದೇಶ್ವರ ಸಂಸ್ಥೆಯ ಉಪಾಧ್ಯಕ್ಷ ಸಂಗು ಸಜ್ಜನ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ರಾಜಶೇಖರ ಗುಡದಿನ್ನಿ ಸೇರಿದಂತೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧಿಕಾರಿಗಳು, ಸಿಬ್ಬಂದಿ, ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ರೈತರು ಮತ್ತಿತರರು ಇದ್ದರು.

# ರಾಮ ಆದರ್ಶ ಆಡಳಿತದ ಪ್ರತಿರೂಪ :ಕಾರಜೋಳ

ಉದಯರಶ್ಮಿ ನ್ಯೂಸ್

ವಿಜಯಪುರ: ಅಯೋಧ್ಯೆಯಲ್ಲಿ ಐತಿಹಾಸಿಕ ಶ್ರೀ ಪ್ರಭು ಶ್ರೀರಾಮನ ಪ್ರಾಣಪ್ರತಿಷ್ಠೆ ನಡೆಯಲಿರುವ ಹಿನ್ನೆಲೆಯಲ್ಲಿ ದೇಶದಾದ್ಯಂತ ಇರುವ ಎಲ್ಲಾ ದೇಗುಲ ಮತ್ತು ತೀಥ-ರ್ಕ್ಷೇತ್ರಗಳಲ್ಲಿ ಸ್ವಚ್ಛತಾ ಕಾರ್ಯ ನಡೆಸಲು ಪ್ರಧಾನಿಶ್ರೀ ನರೇಂದ್ರ ಮೋದಿಜೀ ಅವರ ಕರೆ ಮೇರೆಗೆ ವಿಜಯಪುರ ನಗರದ ವಾರ್ಡ್ ನಂಬರ್ 1 ರ ಅದೃಷ್ಟಲಕ್ಷ್ಮಿ ದೇವಸ್ಥಾನದ ಆವರಣದಲ್ಲಿ ಸ್ವಚ್ಚತಾ ಕಾರ್ಯ ನಡೆಸಲಾಯಿತು.

ನೇತೃತ್ವ ವಹಿಸಿದ್ದ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಉಮೇಶ್ ಕಾರಜೋಳ ಮಾತನಾಡಿ, ಪ್ರಭು ಶ್ರೀರಾಮನ ಮಂದಿರ ಲೋಕಾರ್ಪಣೆಯಾಗುತ್ತಿರುವುದು ಪ್ರತಿ ಭಾರತೀಯನ ಭಕ್ತಿಯ ಪ್ರತೀಕ, ರಾಮನ ಜನ್ಮಭೂಮಿಯಲ್ಲಿ ಭವ್ಯ ಮಂದಿರ ಲೋಕಾರ್ಪಣೆಗೆ ಕ್ಷಣಗಣನೆ ಆರಂಭವಾಗಿದೆ, ಇದು ಪ್ರತಿಯೊಬ್ಬರು ಸಂತಸ ಪಡುವ ಸಂಗತಿ. ಮರ್ಯಾದಾ ಪುರಷೋತ್ತಮ ರಾಮ ಆದರ್ಶ ಆಡಳಿತದ ಪ್ರತಿ-ರೂಪ ಕೂಡ ಹೌದು, ಹೀಗಾಗಿ ರಾಮ ಮಂದಿರ ಲೋಕಾರ್ಪಣೆಯನ್ನು ಜನಸೇವಾ ಕಾರ್ಯ, ಭಕ್ತಿ ಭಾವ ಮೂಡಿಸುವ ಮಂದಿರಗಳ ಸ್ವಚ್ಛ ತೆ ಕಾರ್ಯದ ಮೂಲಕ ಸೇವೆಯ ಮೂಲಕವೇ ಸಂಭ್ರಮಿಸಲಾಗುತ್ತಿದೆ, ಈ ಕಾರಣಕ್ಕೆ ಹೆಮ್ಮೆಯ ಪ್ರಧಾನಿ ಈ ಕರೆ ಕೊಟ್ಟಿದ್ದಾರೆ, ಎಲ್ಲರೂ ಸಹ ನಮ್ಮ ಭಕ್ತಿ ಕೇಂದ್ರಗಳ ಆವರಣಗಳಲ್ಲಿ ಸ್ವಚ್ಚತಾ ಕಾರ್ಯ ನಡೆಸಿ ಪುನೀತ ಭಾವ ಬೆಳೆಸಿಕೊಳ್ಳಬೇಕು ಎಂದರು.

ಯುವ ಮೋರ್ಚಾ ಜಿಲ್ಲಾ ಅಧ್ಯಕ್ಷ ಬಸವರಾಜ ಹೂಗಾರ, ಹಿರಿಯ ಧುರೀಣ ಮಹೇಶ್ ಒಡೆಯರ, ಯುವ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶ್ರೀಕಾಂತ್ ಶಿಂದೆ, ಯುವ ಮೋರ್ಚಾ ಜಿಲ್ಲಾ ಉಪಾಧ್ಯಕ್ಷ



ಶ್ರೀಧರ್ ಬಿಜ್ಜರಗಿ ಯುವ ಮೋರ್ಚ ಪದಾಧಿಕಾ-ರಿಗಳಾದ ಪರಶುರಾಮ್ ಹೊಸಪೇಟ, ದಶರಥ ಕಾಂಬಳೆ, ದಶರಥ ಕ್ಷೀರಸಾಗರ, ಪಕ್ಷದ ಪದಾಧಿಕಾರಿಗಳು, ಸ್ಥಳೀಯ ಮುಖಂಡರು ಸೇರಿದಂತೆ ಕಾರ್ಯಕರ್ತರು, ಭಕ್ತರು ಭಾಗವಹಿಸಿದ್ದರು.

# ಬಸವನಬಾಗೇವಾಡಿ: ಸಂಭ್ರಮದ ಸಂಕ್ರಾಂತಿ ಆಚರಣೆ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಪಟ್ಟಣ ಸೇರಿದಂತೆ ತಾಲೂಕಾದ್ಯಂತ ಜನರು ಸೋಮವಾರ ಸಂಕ್ರಾಂತಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಿದರು.

ರೈತ ಬಾಂಧವರು ತಮ್ಮ ಹೊಲದಲ್ಲಿ ಬೆಳೆದು ನಿಂತಿ-ದ್ದ ಬೆಳೆಯಲ್ಲಿನ ಐದು ಜೋಳದ ತೆನೆ, ಗೋಧಿ ತೆನೆ, ಕಡಲೆ ಗಿಡ ಮಾರುಕಟ್ಟೆಯಲ್ಲಿ ಖರೀದಿಸಿದ್ದ ಬಾರಿಹಣ್ಣು ಸೇರಿದಂತೆ ವಿವಿಧ ಹಣ್ಣುಗಳನ್ನು ತಂದು ಮನೆಯಲ್ಲಿನ ದೇವರ ಜಗುಲಿ ಮೇಲೆ ಇಟ್ಟು ದೇವರ ಪೂಜೆಯೊಂದಿಗೆ ಬೆಳೆಗಳ ತೆನೆಗಳಿಗೆ ಪೂಜೆ ಸಲ್ಲಿಸಿದರು. ಹಬ್ಬಕ್ಕಾಗಿ ತಯಾ-ರಿಸಿದ ವಿವಿಧ ಖಾದ್ಯದೊಂದಿಗೆ ಎಳ್ಳು, ಬೆಲ್ಲದೊಂದಿಗೆ ಮನೆಯ ದೇವರಿಗೆ ನೈವೇದ್ಯ ಅರ್ಪಿಸಿದರು.

ಸಂಜೆ ಕುಟುಂಬ ಸದಸ್ಯರು ಎಳ್ಳು, ಬೆಲ್ಲ, ಕಾಯಿ ಕರ್ಪೂರದೊಂದಿಗೆ ವಿವಿಧ ದೇವಸ್ಥಾನಗಳಿಗೆ ತೆರಳಿ ಪೂಜೆ ಸಲ್ಲಿಸಿದರು. ನಂತರ ಕುಟುಂಬ ಸದಸ್ಯರು, ಸಂಬಂಧಿಕರು, ಹಿರಿಯರು, ಸ್ನೇಹಿತರಿಗೆ ಪರಸ್ಪರ



ಎಳ್ಳು ಬೆಲ್ಲ (ಕುಸುರೆಳ್ಳು) ವಿನಿಮಯ ಮಾಡಿಕೊಂಡು ಹಬ್ಬದ ಶುಭಾಶಯ ಕೋರಿದರು.

ಲಕ್ಷ್ಮೀ ನಗರದಲ್ಲಿ ವಿಶಿಷ್ಟ ಆಚರಣೆ : ಪಟ್ಟಣದ ಲಕ್ಷ್ಮೀ ನಗರದ ನಿವಾಸಿಗಳು ಸಂಕ್ರಾಂತಿ ಹಬ್ಬವನ್ನು ವಿಶಿಷ್ಟವಾಗಿ ಆಚರಿಸಿದ್ದು ಗಮನ ಸೆಳೆಯಿತು. ಮಹಿಳೆಯರು ಬಡಾವಣೆಯ ವಿಶಾಲ ಜಾಗೆಯನ್ನು ಸ್ವಚ್ಛಗೊಳಿಸಿ, ನೀರು ಸಿಂಪಡಿಸಿ ರಂಗವಲ್ಲಿ ಚಿತ್ತಾರ ಬಿಡಿಸಿದ ನಂತರ ಕಬ್ಬು, ಎಳ್ಳು, ಬೆಲ್ಲ, ಬಣ್ಣ ಹಚ್ಚಿದ ಮಡಕೆಯಲ್ಲಿ ವಿವಿಧಧಾನ್ಯಗಳನ್ನು ಹಾಕಿ ಸಾಮೂಹಿಕವಾಗಿ ಪೂಜೆ ಸಲ್ಲಿಸಿ ಆರತಿ ಬೆಳಗಿದರು. ನಂತರ ಪರಸ್ಪರ ಎಳ್ಳು, ಬೆಲ್ಲ ಹಂಚಿದರು.

ಹಬ್ಬದ ವಿಶೇಷ ಪೂಜೆಯಲ್ಲಿ ಶಿವಮ್ಮ ಬಿಜಾಪುರ, ಶಂಕ್ರಮ್ಮ ನಾಯ್ಕೋಡಿ, ಭಾಗಮ್ಮ ಇಂಗಳೇಶ್ವರ, ಶಾರದಾ ಹಿಪ್ಪರಗಿ, ಪುಷ್ಪಾ, ಪ್ರತಿಭಾ ಪಡಶೆಟ್ಟಿ , ಶಿಲ್ಪಾ ಓಜಿ, ಶ್ರೀದೇವಿ ಹಿರೇಮಠ, ಸವಿತಾ ರಾಂಪೂರ, ನಿರ್ಮಲಾ ಬಿಸನಾಳ, ಶೃತಿ ನಾಯಕ, ತಾಯಮ್ಮ ಬೇಲಿ ಸೇರಿದಂತೆ ಮುಂತಾದವರು ಭಾಗವಹಿಸಿದ್ದರು.

## ಮಾ.5ರಿಂದ ನಡೆವ ಡಾ.ಚನ್ನವೀರ ದೇವರ ಪಟ್ಟಾಧಿಕಾರ ಮಹೋತ್ಸವದ ಯಶಸ್ಸಿಗೆ ಮುಖಂಡರ ಮನವಿ

# ಪಕ್ಷಾತೀತ-ಜಾತ್ಯಾತೀತವಾಗಿ ಪಟ್ಟಾಧಿಕಾರ ಮಹೋತ್ಸವಕ್ಕೆ ಕೈಜೋಡಿಸಿ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ತಾಲೂಕಿನ ಕುಂಟೋಜಿ ಗ್ರಾಮದಲ್ಲಿ ಮಾರ್ಚ 5,6,7 ರಂದು ನಡೆಯಲಿರುವ ಡಾ.ಚನ್ನವೀರ ದೇವರ ಪಟ್ಟಾಧಿಕಾರ ಮಹೋತ್ಸವ ರಾಜ್ಯದಲ್ಲಿಯೇ ಇತಿಹಾಸ ಸೃಷ್ಟಿಸಬೇಕು. ಅದಕ್ಕೆ ಎಲ್ಲ ಭಕ್ತ ಸಮೂಹದ ಒಗ್ಗಟ್ಟು ಅವಶ್ಯವಿದೆ ಎಂದು ಜಿಲ್ಲಾ ಪಂಚಾಯತ ಮಾಜಿ ಉಪಾಧ್ಯಕ್ಷ, ಪಟ್ಟಾಧಿಕಾರ ಮಹೋತ್ಸವದ ಕಾರ್ಯಾಧ್ಯಕ್ಷ ಪ್ರಭುಗೌಡ ದೇಸಾಯಿ ಹೇಳಿದರು.

ಕುಂಟೋಜಿಯ ಬಸವೇಶ್ವರ ದೇವಸ್ಥಾನದ ದಾಸೋಹ ಭವನದಲ್ಲಿ ನಡೆದ ಪಟ್ಟಾಧಿಕಾರ ಮಹೋತ್ಸವದ ಸಮಿತಿ ರಚನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಡಾ.ಚನ್ನವೀರ ದೇವರು ಇಲ್ಲಿಯವರೆಗೆ ತಮಗಾಗಿ ಏನನ್ನೂ ಬಯಸದೇ ಸದಾ ಸಮಾಜ ಮುಖಿ ಕಾರ್ಯಗಳನ್ನು ಮಾಡುತ್ತ ಬಂದಿದ್ದಾರೆ. ಬಡವರ ನೋವಿಗೆ, ದೀನ ದಲಿತರ ಕಷ್ಟಕ್ಕೆ ತುರ್ತು ಸ್ಪಂದನೆ ನೀಡಿದ್ದಾರೆ. ಜಾತಿ, ಮತ, ಪಂಥ ಎನ್ನದೇ ನೊಂದವರ ದನಿಯಾಗಿ ನಿಂತಿದ್ದಾರೆ. ಬಿಸಿಲಿನಲ್ಲಿ ಕುಳಿತು ವ್ಯಾಪಾರ ಮಾಡುವ ಅದೆಷ್ಟೋ ಬೀದಿ ವ್ಯಾಪಾರಸ್ಥರಿಗೆ ದಾನಿಗಳ ಸಹಾಯ ಪಡೆದು ಮಾನವೀಯ ನೆರಳು ನೀಡಿದ್ದಾರೆ. ಅವಘಡಗಳು ಸಂಭವಿಸಿ ಕಣ್ಣೀರಿಡುತ್ತಿದ್ದ ಕುಟುಂಬದ ಕಣ್ಣೀರೊರೆಸುವಲ್ಲಿ ಮೊದಲನೆಯವರಾಗಿದ್ದಾರೆ. ಕೋವಿಡ್ ಸಂದರ್ಭದಲ್ಲಿ ಕಲಾ ತಂಡದೊಂದಿಗೆ ಮುದ್ದೇಬಿಹಾಳ ಪಟ್ಟಣದ ತುಂಬೆಲ್ಲ



ತಿರುಗಾಡಿ ಜಾಗೃತಿ ಮೂಡಿಸಿದ್ದಾರೆ. ಇವರ ಪಟ್ಟಾಧಿಕಾರವನ್ನು ಅದ್ದೂ-ರಿಯಾಗಿ ನೆರವೇರಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಮತಕ್ಷೇತ್ರದ ಪ್ರತಿಯೊಬ್ಬರೂ ಪಕ್ಷಾತೀತವಾಗಿ, ಜಾತ್ಯಾತೀತವಾಗಿ ಪಟ್ಟಾಧಿಕಾರ ಮಹೋತ್ಸವದಲ್ಲಿ ಕೈಜೋಡಿಸಬೇಕು ಎಂದು ಮನವಿ ಮಾಡಿಕೊಂಡರು.

ಪಿ.ಬಿ.ಹುನಶ್ಯಾಳದ ಆನಂದ ದೇವರು ಸಾನಿಧ್ಯ ವಹಿಸಿ ಮಾತನಾಡಿ, ಪಟ್ಟಾಧಿಕಾರ ನೋಡುವ ಭಾಗ್ಯ ಎಲ್ಲರಿಗೂ ದೊರಕಲ್ಲ. ನಮಗೆ ನಿಮಗೆ ನೋಡುವ ಮಾತ್ರವಲ್ಲದೇ ಪಟ್ಟಾಧಿಕಾರದ ಕಾರ್ಯಕ್ರಮಗಳಲ್ಲಿ ಭಾಗಿಯಾಗುವ ಅವಕಾಶ ಸಿಕ್ಕಿದೆ ಎಂದರೆ ಅದು ಯಾವುದೋ ಜನ್ಮದ ಪುಣ್ಯ. ಕೆಟ್ಟ ಕೆಲಸಗಳಿಗೆ ಕರೆದರೂ ಹೋಗಬಾರದು, ಆದರೆ ಒಳ್ಳೆಯ ಕಾರ್ಯ ನಡೆದಲ್ಲಿ ಕರೆಯಯದೇ ಹಾಜರಾಗಬೇಕು. ಇದು ಬದುಕಿನ ಪ್ರಮುಖ ತತ್ವ. ಪಟ್ಟಾಧಿಕಾರ ಮಹೋತ್ಸವಕ್ಕೆ ಎಲ್ಲ ಭಕ್ತಗಣದ ಪ್ರೋತ್ಸಾಹ ಅತೀ ಅವಶ್ಯ. ಪಟ್ಟಾಧಿಕಾರದ ಪ್ರತಿಯೊಂದು ಕಾರ್ಯಕ್ರಮದಲ್ಲಿ ಪ್ರತಿಯೊಬ್ಬರೂ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದರು.

ದಿವ್ಯ ಸಾನಿಧ್ಯ ವಹಿಸಿದ್ದ ಡಾ.ಚನ್ನವೀರ ದೇವರು ಮಾತನಾಡಿ, ಎಲ್ಲ ಭಕ್ತ ಗಣ ನನ್ನ ಜೊತೆಗಿದ್ದೀರಿ ಎಂಬ ನಂಬಿಕೆ ಇದೆ. ಪಟ್ಟಾಧಿಕಾರದ ಪೂರ್ವಭಾವಿ ಸಭೆಯನ್ನೇ ಅಷ್ಟೊಂದು ಅದ್ದೂರಿಯಾಗಿ ಮಾಡಿದವರು ಪಟ್ಟಾಧಿಕಾರ ಮಹೋತ್ಸವವನ್ನು ಇನ್ನಷ್ಟು ಅದ್ದೂರಿಯಾಗಿಸುತ್ತೀರಿ ಎಂದು ಕನಸು ಕಂಡಿದ್ದೇನೆ. ಸಧ್ಯ ನನ್ನ ಜೊತೆಗಿರುವ ಸ್ವಾಮೀಜಿಗಳು ಅಗಾಧವಾದ ಶಕ್ತಿ, ಪಾಂಡಿತ್ಯವನ್ನು ಹೊಂದಿರುವವರು. ಇಂತಹ ಪೂಜ್ಯರು ನನ್ನ ಪಟ್ಟಾಧಿಕಾರ ಮಹೋತ್ಸವದಲ್ಲಿ ಭಾಗಿಯಾಗಿರುವುದು ನನ್ನ ಭಾಗ್ಯ ಮತ್ತು ನನ್ನ ಚೈತನ್ಯವನ್ನು ಇನ್ನಷ್ಟು ಇಮ್ಮಡಿಗೊಳಿಸಿದೆ. ಎಲ್ಲ ಭಕ್ತರು ನನ್ನನ್ನು ತಮ್ಮ ಮನೆಯ ಮಗನೆಂದು, ಈ ಸಮಾಜದ ಸೇವಕನೆಂದು ತಿಳಿದು ಈ ಪಟ್ಟಾಧಿಕಾರ ಮಹೋತ್ಸವದಲ್ಲಿ ತನು, ಮನ, ಧನದಿಂದ ಪಾಲ್ಗೊಳ್ಳಬೇಕು ಎಂದು ಕೇಳಿಕೊಂಡರು.

ಯರನಾಳ ಹಿರೇಮಠದ ಶಿವಪ್ರಸಾದ ದೇವರು, ದೋಟಿಹಾಳದ ಚಂದ್ರಶೇಖರ ದೇವರು, ಹುಬ್ಬಳ್ಳಿಯ ಶಿವಬಸವ ದೇವರು ಸಾನಿಧ್ಯ ವಹಿಸಿ ಮಾತನಾಡಿದರು. ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಪ್ರಭುರಾಜ ಕಲಬುರ್ಗಿ, ಗಣ್ಯ ವ್ಯಾಪಾರಿ ಶರಣು ಸಜ್ಜನ, ಮುಖಂಡ ಅಶೋಕ ನಾಡಗೌಡ, ಮಾಜಿ ಸೈನಿಕರ ಸಂಘದ ಅಧ್ಯಕ್ಷ ಆರ್.ಆಯ್.ಹಿರೇಮಠ, ಗ್ರಾಮದ ಪ್ರಮುಖರಾದ ಶಿವಲಿಂಗಪ್ಪ ಗಸ್ತಿಗಾರ, ಸಂಗನಗೌಡ ಪಾಟೀಲ, ಗುರು ಸುಳ್ಳೊಳ್ಳಿ, ಸಂಗಪ್ಪ ಪಲ್ಲೇದ, ಗುರುಪಾದ ಹೆಬ್ಬಾಳ, ಮಲ್ಲಪ್ಪ ಯರಝುರಿ ಸೇರಿದಂತೆ ತಾಯಂದಿರು ಭಾಗಿಯಾಗಿದ್ದರು.

# ಚಿಮ್ಮಡದಲ್ಲಿ ಸಂಕ್ರಾಂತಿ ಹಬ್ಬದ ಸಂಭ್ರಮಾಚರಣೆ

ಉದಯರಶ್ಮಿ ನ್ಯೂಸ್

- ಇಲಾಹಿ ಇ. ಜಮಖಂಡಿ

ಚಿಮ್ಮಡ: ಆಧುನಿಕತೆಯ ಭರಾಟೆ ನಡುವೆಯೂ ಉತ್ತರ ಕರ್ನಾಟಕದ ಗ್ರಾಮೀಣ ಭಾಗಗಳಲ್ಲಿ ಸಂಕ್ರಾಂತಿ ಎಂದೇ ಕರೆಯಲ್ಪಡುವ ಮಕರ ಸಂಕ್ರಮಣವನ್ನು ಈ ಭಾಗದಲ್ಲಿ ಸೋಮವಾರ ಮತ್ತು ಮಂಗಳವಾರ ಸಂಭ್ರಮ, ಸಡಗರದೊಂದಿಗೆ ಆಚರಿಸಲಾಯಿತು.

ಸೂರ್ಯದೇವನು ತನ್ನ ಪಥ ಬದಲಾಯಿಸಿ ಒಂದು ರಾಶಿಯಿಂದ ಮತ್ತೊಂದು ರಾಶಿಯತ್ತ ತನ್ನ ಕಿರಣ ಬೀರುತ್ತಾನೆ. ದಕ್ಷಿಣ ದಿಕ್ಕಿನಿಂದ ಉತ್ತರದ ಕಡೆಗೆ ಅರ್ದ ವರ್ಷ ಪಯಣ ಮಾಡಿ ಮಕರ ರಾಶಿಗೆ ಆಗಮಿಸುತ್ತಾನೆ ಎಂಬುದು ಧಾರ್ಮಿಕ ನಂಬಿಕೆ. ಈ ಸಮಯದಲ್ಲಿ ರೈತಾಪಿ ಜನರ ಸುಗ್ಗಿಕಾಲವಾಗಿದ್ದು ಸುಗ್ಗಿಯನ್ನು ಮುಕಾಯಗೊಳಿಸಿ ಭುವಿಯನ್ನು ಸೂರ್ಯನ ಒಡಲಿಗೆ ಹರಿಬಿಟ್ಟು ವಿವಿಧ ಬಣ್ಣ ವಸ್ತುಗಳಿಂದ ಶೃಂಗರಿಸಿದ ಎತ್ತಿನ ಬಂಡಿ ಹೂಡಿಕೊಂಡು ಇಡೀ ಕುಟುಂಬದೊಂದಿಗೆ ತಮ್ಮ ನಂಬಿಕೆಯ ದೇವರ ದರ್ಶನ ಮಾಡಿಕೊಂಡು ಕರೀ ದಿನವಾದ ಮಂಗಳವಾರ ನದೀ ತೀರಕ್ಕೆ ಹೋಗಿ ವಿಶೇಷ ಅಡುಗೆ ತಯಾರಿಸಿಕೊಂಡು ಕುಟುಂಬದೊಂದಿಗೆ ಊಟಮಾಡಿ ಜಲ ಚರಗಳಿಗೂ ಉಣಬಡಿಸಿ ಇಡೀದಿನ ಪ್ರಕೃತಿ ಮಡಿಲಲ್ಲಿ ಕಳೆಯುವ ಪದ್ಧತಿ ಮೊದಲಿನಿಂದಲೂ ನಡೆದುಕೊಂಡು ಬಂದಿದ್ದು, ಅದರಂತೆ ಸೋಮವಾರವೂ ಈ ಭಾಗದ ರೈತರು ಚಿಮ್ಮಡ ಹಾಗೂ ಮಹಾಲಿಂಗಪುರದ ಅಲಂಕೃತ ನಂದಿಕೋಲು, ಪ್ರಭುವಿನ ಮೂರ್ತಿಹೊತ್ತ ಪಲ್ಲಕ್ಕಿ, ಮಲ್ಲಿಕಾರ್ಜುನ ದೇವರ ಕಂಬಿಯನ್ನು ಹೊತ್ತುಕೊಂಡು ಸಕಲವಾದ್ಯ ವೃಂದಗಳೊಂದಿಗೆ ಗ್ರಾಮದ ಪ್ರಮುಖರಸ್ತೆಗಳಲ್ಲಿ ಭಕ್ತಿ-ಗೌರವದೊಂದಿಗೆ ಮೆರವಣಿಯ ಮೂಲಕ ರಬಕವಿಯ ಕೃಷ್ಣಾನದಿ ತೀರಕ್ಕೆ ಹೋಗಿ ನದಿಯಲ್ಲಿ ಮಿಂದೆದ್ದು "ಈಶ್ವರಲಿಂಗ"ದ ದರ್ಶನ ಪಡೆದು ಸಾಯಂಕಾಲ ವಾಪಸ್ಸಾಗುತ್ತಾರೆ. ಅಲ್ಲಿಂದ ಗ್ರಾಮದ ರೈತಾಪಿ ಜನರೆಲ್ಲ ಸೇರಿ ಪಾದಯಾತ್ರೆ ಮೂಲಕ ಗ್ರಾಮದ ಪ್ರಭುಲಿಂಗೇಶ್ವರ ದೇವಸ್ಥಾನದ ವರೆಗೆ ಬಂದು ಅಲ್ಲಿ ವಿಶೇಷ ಪೂಜೆ ನೆರವೇರಿಸಿ ನಂತರ ಮಹಾಲಿಂಗಪುರದ ನಂದಿಕೋಲವನ್ನು



ಬೀಳ್ಕೊಡಲಾಯಿತು.

ಈ ಉತ್ಸವದಲ್ಲಿ ಗ್ರಾಂ.ಪಂ. ಮಾಜಿ ಅಧ್ಯಕ್ಷ ಗುರಲಿಂಗಪ್ಪಾ ಪೂಜಾರಿ, ಪ್ರಮುಖರಾದ ರಾಮಣ್ಣ ಮುಗಳಖೋಡ, ಪುಂಡಲಿಕಪ್ಪಾ ಪೂಜಾರಿ, ಬಾಳಪ್ಪಾ ಹಳಿಂಗಳಿ, ಗುರಪ್ಪಾ ಬಳಗಾರ, ಗ್ರಾಂಪಂ ಮಾಜಿ ಅಧ್ಯಕ್ಷ ಪರಪ್ಪಾ ಪಾಲಭಾವಿ, ಬೀರಪ್ಪ ಹಳೆಮನಿ, ಬಸವರಾಜ ಕುಂಚನೂರ, ಸೇರಿದಂತೆ ಚಿಮ್ಮಡ, ಮಹಾಲಿಂಗಪುರ ಭಾಗದ ಹಲವಾರು ಪ್ರಮುಖರು ಪಾಲ್ಗೊಂಡಿದ್ದರು.

ಗ್ರಾಪಂ ಮಾಜಿ ಅಧ್ಯಕ್ಷ ಪರಪ್ಪಾ ಪಾಲಭಾವಿ ಭಕ್ತಾಧಿಗಳಿಗೆ ಅಲ್ಪೋಪಹಾರದ ವ್ಯವಸ್ಥೆ ಕೈಗೊಂಡಿದ್ದರು.

# ಅಭಿನಂದನ ಕೃತಿಗಳು ಸಾಹಿತ್ಯದ ಒಂದು ಭಾಗ :ಡಾ.ಐಹೊಳೆ

ಉದಯರಶ್ಮಿ ನ್ಯೂಸ್

ವಿಜಾಪುರ: ಆಧ್ಯಾತ್ಮಿಕ ಪ್ರವಚನದ ಮೂಲಕ ಭಾವೈಕ್ಯತೆಯನ್ನು, ಕೌಟುಂಬಿಕ ಮೌಲ್ಯಗಳನ್ನು ಬಿತ್ತ-ರಿಸಿದವರು ಶಂಕ್ರಯ್ಯ ಸ್ವಾಮೀಜಿಗಳು. ಧಾರ್ಮಿಕ ಸಮಾಜಕ ಸಾಂಸ್ಕೃತಿ-ಕವಾಗಿ ಅಪಾರವಾದ ಕೊಡುಗೆ ನೀಡಿದ ಶಂಕ್ರಯ್ಯ ಸ್ವಾಮೀ-ಜಿಯವರ ಕುರಿತು ರಚನೆಯಾದ' ನಿಜ ಜಂಗಮ' ಅಭಿನಂದನಾಕೃತಿ ಅರ್ಥಪೂರ್ಣ ಮತ್ತು ಮೌಲಿಕ ಕೃತಿಯಾಗಿದೆ ಎಂದು ನಾಗಠಾಣ ಉದಯಲಿಂಗೇಶ್ವರ ಹಿರೇಮಠದ ಪೂಜ್ಯ ಚೆನ್ನಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ತಿಕೋಟ ತಾಲೂಕಿನ ತಾಜಾಪುರ ತೋಟದ ಆಶ್ರಮದ ಶ್ರೀ ಮಡಿವಾಳೇಶ್ವರ ಮಠದಲ್ಲಿ ಹಮ್ಮಿಕೊಳ್ಳಲಾಗಿದ್ದ ನಿಜ ಜಂಗಮನ ಅಭಿನಂದನ ಗ್ರಂಥ-'ವನ್ನು ಲೋಕಾರ್ಪಣೆ ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡಿದರು ದಣಿ ಅರಿಯದ ಸಮಾಜ ಸೇವೆಯಿಂದ ಮಾನವನು ದೇವನಾಗುತ್ತಾನೆ ನಮ್ಮಲ್ಲಿರುವ ಉತ್ತಮ ಗುಣಗಳೇ ನಮ್ಮನ್ನು ಎಚ್ಚರಿಕೆ ತೆಗೆದುಕೊಂಡು ಹೋಗುತ್ತವೆ. ಶಂಕ್ರಯ್ಯ ಸ್ವಾಮೀ-



ಜಿಗಳು ನಾಡಿನಾದಂತ ಪ್ರವಚನ ನೀಡಿ ಭಕ್ತರನ್ನು ಉದ್ಧಾರ ಮಾಡಿದರು ಹೋದಲ್ಲ ಭಕ್ತರಿಗೆ ಲಿಂಗಧಾರಣೆ ಪೂಜಾವಿಧಾನವನ್ನು ಕಳಿಸಿಕೊಡುತ್ತಿದ್ದರು.

ನಿಜ ಜಂಗಮ ಅಭಿನಂದನ ಗ್ರಂಥವನ್ನು ಪರಿಚಯಿಸಿದ ಬಬಲೇಶ್ವರ ಶಾಂತವೀರ ಕಾಲೇಜಿನ ರಾಜ್ಯಪ್ರಶಸ್ತಿ ಪುರಸ್ಕೃತ ಮಹಾದೇವ ರೆಬಿನಾಳ ಮಾತನಾಡಿ, ಈ ಗ್ರಂಥದಲ್ಲಿ ಸ್ವಾಮೀ-ಜಿಗಳ ಜೀವನ ಬಾಲ್ಯ ಅವರ ಸಮಾಜ ಸೇವೆ ಮಠಮಾನ್ಯಗಳ ಪರಿಚಯವನ್ನು ಸಮಗ್ರವಾಗಿ ಒಳಗೊಂಡಿದೆ ಎಂದರು.

ಗ್ರಂಥದ ಪ್ರಧಾನ ಸಂಪಾದಕರಾದ ಡಾ. ವಿ. ಡಿ. ಐಹೊಳೆ ಮಾತನಾಡಿ, ಉದಯೋನ್ಮುಖ ಬರಹಗಾರರು ಲೇಖಕರು ಮಾನವಿ ಮೌಲ್ಯಗಳನ್ನು ಹಾಗೂ ಸಮಾಜದ ಸಂಬಂಧಗಳ ಬೆಸೆದವರ ಕುರಿತು ಬರೆಯಬೇಕು. ಅಭಿನಂದನಾ ಗ್ರಂಥ ಸಾಹಿತ್ಯದ ಒಂದು ಭಾಗವಾಗಿದೆ ಕಾಯಕದಲ್ಲಿ ಕೈಲಾಸ ಕಂಡ ಶ್ರೀಗಳ ಕೃತಿ ಅಥ-'ರ್ಪೂರ್ಣವಾಗಿದೆ ಎಂದರು.

ಗ್ರಂಥವನ್ನು ಲೋಕಾರ್ಪ ಣೆಗೊಳಿಸಿದ ಕಣ್ಣೂರು ಹಿರೇಮಠದ ಪೂಜ್ಯ ಸೋಮನಾಥ ಶಿವಾಚಾರ್ಯರು ಮಾತನಾಡಿ, ಶಂಕ್ರಯ್ಯಸ್ವಾಮಿಜಿಗಳು ಸಂಸಾರದಲ್ಲಿದ್ದುಕೊಂಡು ಪರ ಮಾರ್ಥವನ್ನು ಶ್ರೀಗಳು ಹಣಕ್ಕೆ ಬೆಲೆ ಕೊಡದೆ ಜನರ ಭಾವನೆಗಳಿಗೆ ಮನಸೋತವರು. ಇಡೀ ಜೀವನದ ಸಾಧನೆಯನ್ನು ನಿಜ ಜಂಗಮ ಗ್ರಂಥ-'ದಲ್ಲಿ ಅಡಗಿದೆ ಎಂದರು .

ತಡವಲದ ಹಿರೇಮಠದ ಅಭಿನವ ರಾಚೋಟೇಶ್ವರ ಸ್ವಾಮೀಜಿಗಳು ಮಮದಾಪುರ ವಿರಕ್ತಮಠದ ಅಭಿನವ ಮುರುಘೇಂದ್ರ ಸ್ವಾಮೀಜಿಗಳು ಸಾನಿಧ್ಯ ವಹಿಸಿದ್ದರು.

ಅನುವಾದ್ ಬಾಬುರಾವ ಮಹಾರಾಜರು, ಮುಖಂಡರಾದ ಆರ್ ಜಿ ಯೆರನಾಳ, ಗುರುಲಿಂಗಪ್ಪ ಅಂಗಡಿ, ಡಾ. ಸುರೇಶ ಬಿರಾದಾರ ಮುಂತಾದವರು ವೇದಿಕೆ ಮೇಲಿದ್ದರು

# ಬಿಜೆಪಿ ಅಧ್ಯಕ್ಷರಾಗಿ ಪಾಟೀಲ ಆಯ್ಕೆ :ಕಾರ್ಯಕರ್ತರ ಸಂಭ್ರಮ

ಉದಯರಶ್ಮಿ ನ್ಯೂಸ್



ದೇವರಹಿಪ್ಪರಗಿ: ಜಿಲ್ಲಾ ಭಾರತೀಯ ಜನತಾ ಪಕ್ಷದ ಅಧ್ಯಕ್ಷರಾಗಿ ಆರ್. ಎಸ್.ಪಾಟೀಲ (ಕುಚಬಾಳ) ಎರಡನೆಯ ಬಾರಿಗೆ ಆಯ್ಕೆಯಾದ ಹಿನ್ನೆಲೆಯಲ್ಲಿ ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿಹಂಚಿ ಸಂಭ್ರಮಿಸಿದರು.

ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ಸೋಮವಾರ ಸೇರಿದ ಕಾರ್ಯಕರ್ತರು ನೂತನ ಅಧ್ಯಕ್ಷರ ಆಯ್ಕೆಗೆ ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಸದಸ್ಯ ರಮೇಶ ಮಸಬಿನಾಳ ಮಾತನಾಡಿ, ಮುಂದಿನ ಲೋಕಸಭೆಯ ಚುನಾವಣೆಯಲ್ಲಿ ನೂತನ ಅಧ್ಯಕ್ಷರ ನೇತೃತ್ವದಲ್ಲಿ ಪಕ್ಷ ಜಿಲ್ಲೆಯಲ್ಲಿ ಮತ್ತೆ ಜಯಭೇರಿ ಭಾರಿಸಿ ನೆಚ್ಚಿನ ಪ್ರಧಾನಿ ಮೋದಿಯವರ ಕೈ ಬಲಪಡಿಸುವುದರಲ್ಲಿ ಯಾವುದೇ ಸಂದೇಹವಿಲ್ಲ. ನಾವೆಲ್ಲ ಕಾರ್ಯಕರ್ತರು ನೂತನ ಅಧ್ಯಕ್ಷರ ಮಾರ್ಗದರ್ಶನದಲ್ಲಿ ಪಕ್ಷವನ್ನು ಬಲಪಡಿಸೋಣ ಹಾಗೂ ಮುನ್ನಡೆಸೋಣ ಎಂದರು.

ಯುವಮೋರ್ಚಾ ಜಿಲ್ಲಾ ಸಾಮಾಜಿಕ ಜಾಲತಾಣದ ಸಹ ಸಂಚಾಲಕ ಶಿವರಾಜ ತಳವಾರ, ಸೋಮು ದೇವೂರ, ಮಹಾಂತೇಶ ಗುಡಿಮನಿ, ಚಂದ್ರಶೇಖರ ದಾನಗೊಂಡ, ಕಾಶೀನಾಥ ಚವ್ಹಾಣ, ಸಾಹೇಬಗೌಡ ಬಿರಾದಾರ, ಪರಮಾನಂದ ಹಳ್ಳಿ ಸೇ-ರಿದಂತೆ ಇತರರು ಭಾಗವಹಿಸಿದ್ದರು.

# ಪುಸ್ತಕ ಬಹುಮಾನಕ್ಕಾಗಿ ಕೃತಿಗಳ ಆಹ್ವಾನ

ಉದಯರಶ್ಮಿ ನ್ಯೂಸ್

ವಿಜಯಪುರ: ಕರ್ನಾಟಕ ಸಾಹಿತ್ಯ ಅಕಾಡೆಮಿ ವತಿಯಿಂದ 2022ನೇ ವರ್ಷದ ಪುಸ್ತಕ ಬಹುಮಾನಕ್ಕಾಗಿ ಕೃತಿಗಳನ್ನು ಆಹ್ವಾನಿಸಿದೆ.

ಪ್ರತಿ ಆಕಾರದಲ್ಲಿ ವಿಮರ್ಶಕರು ಆಯ್ಕೆ ಮಾಡುವ ಒಂದು ಕೃತಿಗೆ ಬಹುಮಾನ ನೀಡಲಾಗುವುದು. ಬಹುಮಾನಕ್ಕೆ ಸಲ್ಲಿಸುವ ಕೃತಿಗಳು 2022ರ ಜನವರಿ 01 ರಿಂದ 2022ರ ಡಿಸೆಂಬರ್ 31ರೊಳಗೆ ಪ್ರಥಮ ಆವೃತ್ತಿಯಾಗಿ ಪ್ರಕಟವಾಗಿರುವ ಕೃತಿಗಳಾಗಿರಬೇಕು. ಕೃಷಿಯಲ್ಲಿ ಪ್ರಥಮ ಮುದ್ರಣ 2022 ಎಂದು ಮುದ್ರಿತವಾಗಿರಬೇಕು.

ಆಸಕ್ತರು ತಲಾ 4 ಪ್ರತಿಗಳನ್ನು ರಜಿಸ್ಟ್ರಾರ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು-560002 ಇವ-ರಿಗೆ ರಿಜಿಸ್ಟರ್ಡ ಅಂಚೆ ಅಥವಾ ಕೊರಿಯರ್ ಮೂಲಕ ಅಥವಾ ಖುದ್ದಾಗಿ 2024ರ ಫೆಬ್ರುವರಿ 20ರೊಳಗೆ ಸಲ್ಲಿಸಬೇಕು. ಈ ಕು-ರಿತಂತೆ ಹೆಚ್ಚಿನ ಮಾಹಿತಿಗಾಗಿ ದೂ: 080-22211730, 22106460 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ.

# 'ಮತ್ತೊಮ್ಮೆ ಮೋದಿ' ಗೋಡೆ ಬರಹಕ್ಕೆ ಕಾರಜೋಳ ಚಾಲನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: 2024 ಮತ್ತೊಮ್ಮೆ ಮೋದಿ ಎಂಬ ಗೋಡೆ ಬರಹವನ್ನು ವಿಜಯಪುರದ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಬರೆಯುವ ಮೂಲಕ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಉಮೇಶ ಕಾರಜೋಳ ಚಾಲನೆ ನೀಡಿದರು.

ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಎಲ್ಲ ವಾರ್ಡ್ ಗಳಲ್ಲಿ ಈ ಸಂದೇಶದ ಗೋಡೆಬರಹವನ್ನು ಬರೆಯುವ ಕಾರ್ಯ ರೂಪಿಸಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಉಮೇಶ ಕಾರಜೋಳ, ದೇಶ ಇನ್ನಷ್ಟು ಅಭಿವೃದ್ಧಿ ಪಥದತ್ತ ಮುನ್ನಡೆಯಲು ಮೋದಿಜಿ ಅವರು ಇನ್ನೊಮ್ಮೆ ಪ್ರಧಾನಿಯಾಗಬೇಕಾಗಿರುವುದು ಅಗತ್ಯವಾಗಿದೆ. ಭಾರತವನ್ನು ವಿಶ್ವಗುರುವಾಗಿಸುವ ದಿವ್ಯ ಸಂಕಲ್ಪವನ್ನು ಹೊತ್ತು ಕೆಲಸ ಮಾಡಿ ವಿಶ್ರಾಂತಿ, ರಜೆಯನ್ನು ಪಡೆಯದೇ ಕೆಲಸ ಮಾಡುತ್ತಿರುವ ಮೋದಿಜಿ ಅವರಂತಹ ಪ್ರಧಾನಿಯನ್ನು ಪಡೆದಿದ್ದೆ ಒಂದು ಸುದೈವ ಎಂದರು.

ಮೋದಿಜಿ ಅವರ ಕಾಲಘಟ್ಟದಲ್ಲಿ ಪ್ರಾಮಾಣಿಕ, ಜನಪರ ಹಾಗೂ ಪರಿಶುದ್ಧ ಆಡಳಿತ ಪ್ರತಿಯೊಬ್ಬ ಭಾರತೀಯರ ಮನಗೆದ್ದಿದೆ, ವಿದೇಶಿ ರಾಷ್ಟ್ರಗಳು ಸಹ ಮೋದಿಜಿ ನಾಯಕತ್ವಕ್ಕೆ ಮನಸೋತಿವೆ ಎಂದರು.




ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ರದ್ದು, ಭವ್ಯ ರಾಮಮಂದಿರ ನಿರ್ಮಾಣ, ಕಪ್ಪು ಹಣದ ವಿರುದ್ಧ ಸಮರ, ಉಜ್ವಲ ಯೋಜನೆ ಮೂಲಕ ಮನೆ ಮನೆಗೆ ಅಡುಗೆ ಅನೀಲ, ಫಸಲ್‌ಭೀಮಾ ಯೋಜನೆ, ಬೇಟಿ ಬಚಾವೋ ಬೇಟಿ ಪಡಾವೋ ಹೀಗೆ ಮೋದಿಜಿ ಅವರು ರೂಪಿಸಿದ ಜನಪರ, ರೈತಪರ ಕಾರ್ಯಕ್ರಮಗಳ ಪಟ್ಟಿ ದೊಡ್ಡದಿದೆ ಎಂದರು. ಆರ್ಥಿಕತೆಯಲ್ಲಿಯೂ ಗಣನೀಯ ಪ್ರಮಾಣದಲ್ಲಿ ಹೆಚ್ಚಾಗಿದ್ದು, ಇದೇ ರೀತಿಯ ಪ್ರಗತಿಯ ಪರಂಪರೆ ಮುಂದುವರೆಯಲು ಮೋದಿಜಿ ಅವರು ಇನ್ನೊಮ್ಮೆ ಪ್ರಧಾನಿಯಾಗಬೇಕಿದೆ, ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಕಾರ್ಯಕರ್ತ ಬಂಧುಗಳು ಬಿಜೆಪಿ ಗೆಲುವಿಗೆ ಶ್ರಮಿಸಬೇಕು ಎಂದರು.

ಈ ಸಂದರ್ಭದಲ್ಲಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಬಸವರಾಜ ಹೂಗಾರ, ಯುವ ಮೋರ್ಚಾ ರಾಜ್ಯ ಉಪಾಧ್ಯಕ್ಷ ರಾಜಕುಮಾರ ಸಗಾಯಿ, ಯುವ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶ್ರೀಕಾಂತ್ ಶಿಂದೆ, ಅಶೋಕ್ ರಾಥೋಡ್, ಸಾಮಾಜಿಕ ಜಾಲತಾಣದ ಜಿಲ್ಲಾ ಸಂಚಾಲಕ ಸಂದೀಪ ಪಾಟೀಲ, ಮಹೇಶ್ ಒಡೆಯರ, ಕಾರ್ಯದರ್ಶಿ ಶರಣಬಸವ ಕುಂಬಾರ, ಯುವ ಮೋರ್ಚಾ ಜಿಲ್ಲಾ ಉಪಾಧ್ಯಕ್ಷ ಶ್ರೀಧರ್ ಬಿಜ್ಜರಗಿ, ರಾಘವೇಂದ್ರ ಕಾಪ್ಸೆ, ಸಿದ್ದರಾಮ ಆನಗೊಂಡ, ಯುವ ಮೋರ್ಚ ಪದಾಧಿಕಾರಿ ಅನಿಲ ಉಪ್ಪಾರ್, ಪ್ರವೀಣ್ ಕೋಡಗಿ, ದಶರಥ ಕಾಂಬಳೆ, ಆನಂದ್ ಮುಚ್ಚಂಡಿ, ವಿಕಾಸ್ ಕಿಟ್ಟಾ, ನಿಖಿಲ್ ಬಾಗೇವಾಡಿ ಸ್ವರೂಪ್ ಸಪ್ತಾಳೆ ಸೇರಿದಂತೆ ಹಲವರಿದ್ದರು.

# ಜೂಜಾಡುತ್ತಿದ್ದ 7 ಜನರ ಮೇಲೆ ಪ್ರಕರಣ ದಾಖಲು

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ತಾಲೂಕಿನ ಲೊಟಗೇರಿ ಗ್ರಾಮದ ಸಮುದಾಯ ಭವನದ ಮುಂದೆ ಕುಳಿತು ಅಂದರ್–ಬಾಹರ್ ಇಸ್ಪೀಟ್ ಆಡುತ್ತಿದ್ದ 7 ಜನರ ಮೇಲೆ ಪಿಎಸ್‌ಐ ಸಂಜೀವ ತಿಪರೆಡ್ಡಿ ಕರ್ನಾಟಕ ಪೊಲೀಸ್ ಕಾಯ್ದೆ



ಅಡಿ ಕೇಸ್ ದಾಖಲಿಸಿದ್ದಾರೆ.

ಲೊಟಗೇರಿ ಗ್ರಾಮದ ಸಂಗಪ್ಪ ಬಿರಾದಾರ, ಹುಲಗಪ್ಪ ಕೊಳ್ಳಿ, ಹಣಮಂತ ಕೊಳ್ಳಿ, ತಿಮ್ಮಣ್ಣ ಬಿರಾದಾರ, ಲಕ್ಕಪ್ಪ ನಾಗರಬೆಟ್ಟ, ಬಿಜ್ಜೂರ ಗ್ರಾಮದ ಶಿವಪುತ್ರ ಚಾಕರಿ ಮತ್ತು ಘಾಳಪೂಜಿ ಗ್ರಾಮದ ಚೆನ್ನಪ್ಪ ನಾಗರಬೆಟ್ಟ ಮೇಲೆ ಕೇಸ್ ದಾಖಲಾಗಿದೆ.

# ಮಹಿಳೆ ಕಾಣೆ :ದೂರು ದಾಖಲು

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ತಾಲೂಕಿನ ಬಂಗಾರಗುಂಡ ಗ್ರಾಮದ 23ರ ಯುವತಿಯೊಬ್ಬಳು ಕಾಣೆಯಾಗಿರುವ ಬಗ್ಗೆ ಇಲ್ಲಿನ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಸಧ್ಯ ಮುದ್ದೇಬಿಹಾಳ ಪಟ್ಟಣದ ಆಶ್ರಯ ಕಾಲೋನಿಯಲ್ಲಿ ವಾಸವಾಗಿದ್ದ ಅಶ್ವಿನಿ ಪೂಜಾರಿ ಡೈಗ್ನೋಸ್ಟಿಕ್ ಒಂದರಲ್ಲಿ ಕೆಲಸ ಮಾಡುತ್ತಿದ್ದಳು. ಬೆಳಿಗ್ಗೆ ಕೆಲಸಕ್ಕೆ ಎಂದು ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದಾಗಿ ಅಶ್ವಿನಿ ತಂದೆ ಬಾಲಪ್ಪ ಇಲ್ಲಿನ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

# ಶಿವಶರಣರ ಆದರ್ಶಗಳನ್ನು ಪಾಲಿಸೋಣ :ಕುಲಕರ್ಣಿ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಕನ್ನಡ ಸಾಹಿತ್ಯ ಪರಿಷತ್ ಹಾಗೂ ಬಸವ ಶರಣ ಸಂಗಮ ಸೇವಾ ಸಮೀತಿಯಿಂದ ಶಿವಯೋಗಿ ಸಿದ್ಧರಾಮೇಶ್ವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಜಯಂತಿ ಆಚರಿಸಲಾಯಿತು.

ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಸೋಮವಾರ ಪರಿಷತ್ ಹಾಗೂ ಸೇವಾ ಸಮೀತಿಯ ಪದಾಧಿಕಾರಿಗಳು ಶಿವಯೋಗಿ ಸಿದ್ಧರಾಮೇಶ್ವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.



ಈ ಸಂದರ್ಭದಲ್ಲಿ ಬಸವಶರಣ ಸಂಗಮ ಸಮೀತಿಯ ತಾಲ್ಲೂಕು ಅಧ್ಯಕ್ಷ ಸಂಗಪ್ಪಣ್ಣ ತಡವಲ್ ಮಾತನಾಡಿ, ಸಿದ್ಧರಾಮೇಶ್ವರರು ಶ್ರೀಶೈಲ ಮಲ್ಲಿಕಾರ್ಜುನನ ಒಬ್ಬ ಮಹಾನ್ ಭಕ್ತರಾಗಿದ್ದರು. ಅನುಭವ ಮಂಟಪದ ಗೋಷ್ಠಿಯಲ್ಲಿ ಭಾಗವಹಿಸಿ ಮಹಾಶಿವಯೋಗಿ ಎನಿಸಿಕೊಂಡರು ಎಂದು ಮಾಹಿತಿ ನೀಡಿದರು.

ಶಿಕ್ಷಕ ಪ್ರಲ್ಹಾದ್ ಕುಲಕರ್ಣಿ ಮಾತನಾಡಿ, 12ನೇ ಶತಮಾನದ ಶಿವಶರಣರ ಆದರ್ಶಗಳನ್ನು ನಾವೆಲ್ಲರೂ ಪಾಲಿಸೋಣ ಎಂದರು.

ತಾಲ್ಲೂಕು ಪ್ರಾಥಮಿಕ ಶಾಲಾಶಿಕ್ಷಕರ ಸಂಘದ ಅಧ್ಯಕ್ಷ ಎ.ಎಚ್.ವಾಲೀಕಾರ, ಕಸಾಪ ತಾಲ್ಲೂಕು ಅಧ್ಯಕ್ಷ ಜಿ.ಪಿ.ಬಿರಾದಾರ, ಶಾಲೆಯ ಮುಖ್ಯಗುರು ಪಿ.ಸಿ.ತಳಕೇರಿ, ಪಟ್ಟಣ ಪಂಚಾಯಿತಿ ಸದಸ್ಯ ರಮೇಶ ಮಸಬಿನಾಳ, ಸೋಮು ದೇವೂರ, ಸಂಗಮೇಶ ಕೆರೆಪ್ಪಗೋಳ, ನಾಗಯ್ಯ ಹಿರೇಮಠ, ಮಹಾಂತಯ್ಯ ಮಠಪತಿ, ರವಿ ಕೋಟಿನ್, ಬಸವರಾಜ ಬಡಿಗೇರ, ಗುರಣ್ಣ ಹೊಕ್ಕುಂಡಿ, ಶಿವಶಂಕರ ರೂಗಿ, ಎಸ್.ಜಿ.ತಾವರಖೇಡ, ಮಹಾಂತೇಶ ಬಿರಾದಾರ, ಬಸವರಾಜ ಮಾನೆ, ಪರಶುರಾಮ ವಡ್ಡರ, ಲಕ್ಷ್ಮಣ ವಡ್ಡರ, ಪ್ರಭು ಬರಟಗಿ, ಬಸವರಾಜ ವಡ್ಡರ, ಎಸ್.ಎಮ್.ನಂದ್ಯಾಳ ಸೇರಿದಂತೆ ಶಿಕ್ಷಕರು, ಅಖಿಲ ಕರ್ನಾಟಕ ಭೋವಿ ಯುವ ವೇದಿಕೆಯ ಸದಸ್ಯರು ಇದ್ದರು.

# ಜ.18ರಂದು ಜಿಲ್ಲಾ ಮಟ್ಟದ ಜಾನಪದ ಸಮಾವೇಶ

**ಉದಯರಶ್ಮಿ ನ್ಯೂಸ್**

ತಾಳಿಕೋಟಿ: ತಾಲೂಕಿನ ಮೂಕಿಹಾಳ ಗ್ರಾಮದ ಹಜರತ್ ಲಾಡ್ಲೆ ಮಶ್ಯಾಕ ದರ್ಗಾ ಉರುಸು ಪ್ರಯುಕ್ತ ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕ ವಿಜಯಪುರ ಮತ್ತು ಹಜರತ್ ಲಾಡ್ಲೆ ಮಶ್ಯಾಕ ದರ್ಗಾ ಕಮೀಟ ಸಹಯೋಗದಲ್ಲಿ ಜ.18 ಗುರುವಾರ ದಿವಸ “ ಜಿಲ್ಲಾ ಮಟ್ಟದ ಜಾನಪದ ಸಮಾವೇಶ “ ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಜಾನಪದ ಪರಿಷತ್ ವಿಜಯಪುರ ಜಿಲ್ಲಾಧ್ಯಕ್ಷ ಬಾಳನಗೌಡ ಎಸ್ ಪಾಟೀಲ (ಪಡಗಾನೂರ) ತಿಳಿಸಿದ್ದಾರೆ.

ಮೂಕಿಹಾಳ ಗ್ರಾಮದ ದರ್ಗಾದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು , ಬೆಳಿಗ್ಗೆ 11 ಘಂಟೆಗೆ ಹಿರೂರ ಪಡೇಕನೂರ ಮಲ್ಲಿಕಾರ್ಜುನ ಸ್ವಾಮೀಜಿ ಮತ್ತು ದಾವಲಮಲೀಕ ಅಜ್ಜನವರ ಸಾನಿಧ್ಯದಲ್ಲಿ , ಜವಳಿ, ಸಕ್ಕರೆ, ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲರು ಸಮಾವೇಶ ಉದ್ಘಾಟಿಸುವರು. ನಾಗಠಾಣ ಕ್ಷೇತ್ರದ ಶಾಸಕ ವಿಠ್ಠಲ ಕಟಕದೊಂಡ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಜೈನಾಪುರ ಕಲಾವಿದರನ್ನು ಸನ್ಮಾನಿಸುವರು. ಕನ್ನಡ ಜಾನಪದ ಪರಿಷತ್ ವಿಜಯಪುರ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡುವರು. ಸಾಹಿತಿ ಶಿಕ್ಷಕ ಸಾಹೇಬಗೌಡ ಬಿರಾದಾರ ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಜಿ ಪಂ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಕಾಂಗ್ರೆಸ್ ಮುಖಂಡ ಆನಂದಗೌಡ ದೊಡಮನಿ, ಅರ್ಬನ್ ಬ್ಯಾಂಕ್ ಅಧ್ಯಕ್ಷ ಸತೀಶ ಓಸ್ವಾಲ ವಕೀಲರು, ಸಂಘದ ಅಧ್ಯಕ್ಷ ಶಶಿಕಾಂತ ಮಾಲಗತ್ತಿ, ಕಾಂಗ್ರೆಸ್ ಮುಖಂಡ ರಾಯನಗೌಡ ತಾತರಡ್ಡಿ, ಶಿಕ್ಷಣ ಸಂಸ್ಥೆ ಅಧ್ಯಕ್ಷ ಎಸ್ ಎಂ ಸಜ್ಜನ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ , ಮೈಬೂಬ ಚೋರಗಸ್ತಿ, ಮಹಾಂತೇಶ ಮುರಾಳ, ಮತ್ತು ಕನ್ನಡ ಜಾನಪದ ಪರಿಷತ್ ಜಿಲ್ಲಾ ಮತ್ತು ತಾಲೂಕು ಘಟಕದ ಪದಾಧಿಕಾರಿಗಳು ಪಾಲ್ಗೊಳ್ಳುವರು.



ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ 25 ಜಾನಪದ ಕಲಾ ತಂಡಗಳು ಆಗಮಿಸಿ ಕಲಾ ಪ್ರದರ್ಶನ ನೀಡುವರು. ಜಿಲ್ಲೆಯ ಹಿರಿಯ 25 ಜನ ಜಾನಪದ ಕಲಾವಿದರನ್ನು ಸನ್ಮಾನಿಸಲಾಗುವುದು.

ಪತ್ರಿಕಾ ಗೋಷ್ಠಿಯಲ್ಲಿ ಹಜರತ್ ಲಾಡ್ಲೆ ಮಶ್ಯಾಕ ದರ್ಗಾ ಕಮೀಟ ಅಧ್ಯಕ್ಷ ಕಾಶಿಂಪಟೇಲ ಪಾಟೀಲ ಮತ್ತು ಕನ್ನಡ ಜಾನಪದ ಪರಿಷತ್ ತಾಳಿಕೋಟಿ ತಾಲೂಕಾಧ್ಯಕ್ಷ ಸಿಧನಗೌಡ ಕಾಶಿನಕುಂಟಿ ಉಪಸ್ಥಿತರಿದ್ದರು.

# ಗಿಗ್ ಕಾರ್ಮಿಕರ ವಿಮಾ ಯೋಜನೆ ಸದ್ಬಳಕೆ ಮಾಡಿಕೊಳ್ಳಿ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಡೆಲಿವರಿ ವೃತ್ತಿಯಲ್ಲಿ ತೊಡಗಿಕೊಂಡಿರುವ ಅಸಂಘಟಿತ ವಲಯದ ಕಾರ್ಮಿಕರು ಗಿಗ್ ಕಾರ್ಮಿಕರ ವಿಮಾ ಯೋಜನೆಯ ಸದ್ಬಳಕೆ ಮಾಡಿಕೊಳ್ಳುವಂತೆ ಕಾರ್ಮಿಕ ನೀರಿಕ್ಷಕ ಐ.ಎಚ್.ಇನಾಮದಾರ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ದೇಶದಲ್ಲಿಯೇ ಮೊದಲ ಬಾರಿಗೆ ಈ ಯೋಜನೆಯನ್ನು ಜಾರಿಗೊಳಿಸಲಾಗಿದ್ದು, 18 ರಿಂದ 60 ವರ್ಷದ ಒಳಗಿನವರು ಸೇವಾ ಸಿಂಧು ಪೋರ್ಟಲ್ ಮೂಲಕ ಹೆಸರು ನೋಂದಾಯಿಸಿಕೊಳ್ಳಬೇಕು. ಕರ್ತವ್ಯದಲ್ಲಿರುವಾಗ ಮತ್ತು ಇಲ್ಲದಿರುವಾಗ ಅಪಘಾತಗಳು ಸಂಭವಿಸಿದರೆ 2 ಲಕ್ಷಗಳ ವಿಮಾ ಪರಿಹಾರ ಸಿಗಲಿದ್ದು, ಆಧಾರ ಕಾರ್ಡ, ವೃತ್ತಿ ನಿರ್ವಹಿಸುತ್ತಿರುವ ಸಂಸ್ಥೆಗಳು ವಿತರಿಸಿದ ಗುರುತಿನ ಚೀಟಿ, ವೇತನ ಪಡೆದ ಬ್ಯಾಂಕ ಪಾಸ್ ಬುಕ್ ಮತ್ತು ಇ–ಶ್ರಮ್ ನೋಂದಣಿ ಸಂಖ್ಯೆಯೊಂದಿಗೆ ಹೆಸರು ನೋಂದಾಯಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

ದಿನ ಪತ್ರಿಕೆಗಳನ್ನು ಮನೆ, ಮನೆಗೆ ವಿತರಿಸುವ ವಿತರಕರು ಸೇರಿದಂತೆ ಅಮೇಜಾನ, ಸ್ವಿಗ್ಗಿ, ಜೋಮ್ಯಾಟೊ, ಪೋರ್ಟರ್, ಪಾರ್ಮಸಿ, ಬಲಿಂಕಿಟ್, ಜಿಪ್ಪೋ, ಬಿಗ್ ಬಾಸ್ಕೆಟ್, ಡಾಮಿನೋಸ್ ಮುಂತಾದ ಸಂಸ್ಥೆಗಳಲ್ಲಿ ಡೆಲಿವರಿ ವೃತ್ತಿಯಲ್ಲಿ ತೊಡಗಿಸಿಕೊಂಡವರೂ ಸಹ ಈ ಯೋಜನೆಯ ಲಾಭ ಪಡೆಯಬಹುದು ಎಂದು ತಿಳಿಸಿದ್ದಾರೆ.

# 6ನೇ ತರಗತಿ: ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಕೆ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ಹುಣಶ್ಯಾಳ ಪಿಬಿ ಗ್ರಾಮದಲ್ಲಿನ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ 2024–25 ನೇ ಶೈಕ್ಷಣಿಕ ಸಾಲಿಗೆ 6ನೇ ತರಗತಿಗೆ ದಾಖಲಾತಿಗಾಗಿ ನಡೆಸುವ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ.

2023–24ನೇ ಸಾಲಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ವ್ಯಾಪ್ತಿಯಲ್ಲಿನ ಸರ್ಕಾರಿ, ಅನುದಾನಿತ, ಅನುದಾನ ರಹಿತ ಶಾಲೆಗಳಲ್ಲಿ 5ನೇ ತರಗತಿ ಓದುತ್ತಿರುವ ವಿದ್ಯಾರ್ಥಿಗಳು ಆನ್ ಲೈನ್ ವೆಬಸೈಟ್‌ತಿತಿತಿ.ಛಿಠಿಂಟಜಜ–ಣಛಿಚಿಣುಂಟ.ಇಚಿಡಿ.ಟುಛಿ.ಟ

ಮೂಲಕ ಫೆ.6 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಮಾಹಿತಿಗಾಗಿ ಮುಖ್ಯಶಿಕ್ಷಕ ಸುಭಾಸ ಹರಿಜನ (9880789382) ಹಾಗೂ ಚಿತ್ರಕಲಾ ಶಿಕ್ಷಕ ಸಿ.ಜಿ.ಬಾಗೇವಾಡಿ (9481573922) ಅವರನ್ನು ಸಂಪರ್ಕಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವಸಂತ ರಾಠೋಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶರಣ ಸಾಹಿತ್ಯ ಪರಿಷತ್ ದತ್ತಿ ಸ್ಮರಣೆ ಇಂದು

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ಇಂಗಳೇಶ್ವರ ಗ್ರಾಮದ ಎಸ್.ಆರ್. ಹೈಸ್ಕೂಲನಲ್ಲಿ ತಾಲೂಕು ಶರಣ ಸಾಹಿತ್ಯ ಪರಿಷತ್ ಜ.17 ರಂದು ಮಧ್ಯಾಹ್ನ 3 ಗಂಟೆಗೆ ಲಿಂ.ಬಿ. ಎಸ್.ಪಾಟೀಲ ಮಹಾರಾಜರು, ಲಿಂ.ಶ್ರೀಶೈಲಪ್ಪ ಧನಶೆಟ್ಟಿ, ಲಿಂ.ಮುರಿಗೆವ್ವ ಲಿಂ.ಮಲಕಾಜಪ್ಪ ಅಳ್ಳಗಿ ಇವರ ಸ್ಮರಣಾರ್ಥ ದತ್ತಿ ಸ್ಮರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.ಶರಣ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ವಿ.ಬಿ.ಮರ್ತೂರ ಅಧ್ಯಕ್ಷತೆ ವಹಿಸುವರು. ರೇಣುಕಾಚಾರ್ಯ ವಿದ್ಯಾವರ್ಧಕ ಸಂಘದ ನಿರ್ದೇಶಕ ಕೈಲಾಸ ಗುರಪ್ಪ ಸಜ್ಜನ ಕಾರ್ಯಕ್ರಮ ಉದ್ಘಾಟಿಸುವರು. ವಿಜಯಪುರದ ಫ.ಗು.ಹಳಕಟ್ಟಿ ಇಂಜನಿಯರಿಂಗ್ ಕಾಲೇಜಿನ ಪ್ರೊ. ಎಂ.ಐ.ಸಕ್ಕರಿ ಉಪನ್ಯಾಸ ನೀಡುವರು. ಮುಖ್ಯಶಿಕ್ಷಕ ಬಿ.ಬಿ.ಪಾಟೀಲ, ನಿವೃತ್ತ ಶಿಕ್ಷಕ ಆರ್.ಜಿ.ಅಳ್ಳಗಿ, ಎಸ್.ಬಿ.ಐ ನಿವೃತ್ತ ವ್ಯವಸ್ಥಾಪಕ ವೀರೇಶ ಕುಂಟೋಜಿ, ಕದಳಿ ವೇದಿಕೆ ತಾಲ್ಲೂಕು ಘಟಕದ ಅಧ್ಯಕ್ಷೆ ಸಾವಿತ್ರಿ ಕಲ್ಯಾಣಶೆಟ್ಟಿ, ಯುವ ಘಟಕದ ಅಧ್ಯಕ್ಷ ಶರಣು ಬಸ್ತಾಳ ಉಪಸ್ಥಿತರಿರುವರು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಆಲಮಟ್ಟಿಗೆ 25 ಸಾವಿರಕ್ಕೂ ಅಧಿಕ ಪ್ರವಾಸಿಗರ ಭೇಟಿ!

**ಉದಯರಶ್ಮಿ ನ್ಯೂಸ್**

– ಸಂಪದಾ ಹಿರೇಮಠ

ಆಲಮಟ್ಟಿ: ಹೊಸವರ್ಷದ ಪ್ರಥಮ ಹಬ್ಬವೆಂದೇ ಕರೆಯಲಾಗುತ್ತಿರುವ ಎಳ್ಳ ಅಮವಾಸ್ಯೆಯ ಮಕರ ಸಂಕ್ರಮಣ ದಿನವಾದ ಸೋಮವಾರ ಮುಂಜಾನೆಯಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತಾದಿಗಳು, ಪ್ರವಾಸಿಗರು ಆಲಮಟ್ಟಿಗೆ ಆಗಮಿಸಿ ಕೃಷ್ಣೆಯ ಎಡ ಮತ್ತು ಬಲಬದಿಗಳಲ್ಲಿ ಪವಿತ್ರ ಸ್ನಾನ ಮಾಡುತ್ತಿರುವುದು ವಿಶೇಷವಾಗಿತ್ತು.

ಮಕರಸಂಕ್ರಮಣದ ದಿನದಂದು ಸೂರ್ಯನು ತನ್ನ ಪಥವನ್ನು ಬದಲಾಯಿಸಿ ದಕ್ಷಿಣಾಯಣದಿಂದ ಉತ್ತರಾಯಣದ ಕಡೆಗೆ ವಾಲುತ್ತಾನೆ. ಈ ದಿನದಂದು ಪವಿತ್ರ ಕೃಷ್ಣೆಯಲ್ಲಿ ಎಳ್ಳು ಮೈಗೆ ಹಚ್ಚಿಕೊಂಡು ಮಿಂದೆದ್ದು ಉಳಿದವರಿಗೂ ಎಳ್ಳನ್ನು ಹಂಚಿ ದೇವಸ್ಥಾನಗಳಿಗೆ ತೆರಳಿ ದೇವರುಗಳ ದರ್ಶನ ಪಡೆದರೆ ಪುಣ್ಯಪ್ರಾಪ್ತಿಯಾಗುತ್ತದೆಂಬ ನಂಬಿಕೆಯಿಂದ ಸಾವಿರಾರು ಸಂಖ್ಯೆಯಲ್ಲಿ ಮಕ್ಕಳು, ಮಹಿಳೆಯರು, ವಯೋವೃದ್ಧರು ಸೇರಿದಂತೆ ಎಲ್ಲ ವಯೋಮಾನದವರು ಲಿಂಗಭೇದವಿಲ್ಲದೇ ಶಾಸ್ತ್ರಿ ಜಲಾಶಯದ ಹಿನ್ನೀರು ಹಾಗೂ ಮುನ್ನೀರು ಪ್ರದೇಶಗಳಾಗಿರುವ ಪಾರ್ವತಿ ಕಟ್ಟೆ ಸೇತುವೆ ಕೆಳಭಾಗ, ಚಂದ್ರಮ್ಮಾದೇವಿ ದೇವಸ್ಥಾನದ ಬಳಿ, ಕೃಷ್ಣಾ ಸೇತುವೆಗಳ ಕೆಳಭಾಗದಲ್ಲಿ, ಸೀತಿಮನಿ, ಮನಹಳ್ಳಿ, ಯಲಗೂರ, ಯಲ್ಲಮ್ಮನ ಬೂದಿಹಾಳಗಳಲ್ಲಿ ಸಾವಿರಾರು ಸಂಖ್ಯೆಯಲ್ಲಿ ಪವಿತ್ರ ಸ್ನಾನ ಮಾಡಿದರು.

ಸ್ಥಳಾಭಾವ: ದೂರದ ಊರುಗಳಿಂದ ಆಗಮಿಸಿದ್ದ ಪ್ರವಾಸಿಗರು ತಮ್ಮ ವಾಹನಗಳನ್ನು ನಿಲ್ಲಿಸಲು ಪಾರ್ಕಿಂಗ್‌ನಲ್ಲಿ ಸ್ಥಳಾವಕಾಶ ಸಿಗದೇ ಇರುವದರಿಂದ ಲಾಲ್‌ಬಹಾದ್ದೂರ್ ಶಾಸ್ತ್ರಿ ವೃತ್ತದಿಂದ ಜಲಾಶಯದ ಕಟ್ಟಡದ ವೃತ್ತದವರೆಗೂ ರಸ್ತೆಗಳ ಎರಡೂ ಬದಿಗಳಲ್ಲಿ ತಮ್ಮ ವಾಹನಗಳನ್ನು ನಿಲ್ಲಿಸಿ ತಮ್ಮ ಮಕ್ಕಳನ್ನು ವಾಹನದಿಂದ ಕೆಳಗಿಳಿಸಲು ಹಿಂದೊಮ್ಮೆ ಮುಂದೆಯೊಮ್ಮೆ ನೋಡಿಯೇ ಕೆಳಗಿಳಿಸಿ ಉದ್ಯಾನಗಳನ್ನು ವೀಕ್ಷಿಸಲು ಕರೆದುಕೊಂಡು ಹೋಗುವ ಸ್ಥಿತಿ ನಿರ್ಮಾಣವಾಗಿತ್ತು.



ಹಿಡಿಶಾಪ: ಪ್ರವಾಸಿ ತಾಣ ಆಲಮಟ್ಟಿಗೆ ಆಗಮಿಸುವ ಪ್ರವಾಸಿಗರಿಗೆ ತೊಂದರೆಯಾಗಬಾರದೆನ್ನುವ ಮಹದುದ್ದೇಶದಿಂದ ಅಗತ್ಯ ಸ್ಥಳಗಳಲ್ಲಿ ಕೃಷ್ಣಾ ಭಾಗ್ಯ ಜಲ ನಿಗಮದವತಿಯಿಂದ ಕುಡಿಯುವ ನೀರಿನ ನಲ್ಲಿ, ಶೌಚಾಲಯಗಳನ್ನು ನಿರ್ಮಿಸಿದ್ದರೂ ನಿರ್ವಹಣೆಯ ಕೊರತೆಯಿಂದ ಕೆಲ ಶೌಚಾಲಯಗಳು ಬಂದ್ ಆಗಿದ್ದರೆ ಇನ್ನು ಕೆಲ ಶೌಚಾಲಯಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿಂದ ಪ್ರವಾಸಿಗರು ಕೃಷ್ಣಾಭಾಗ್ಯ ಜಲ ನಿಗಮದ ಅಧಿಕಾರಿಗಳಿಗೆ ಹಿಡಿಶಾಪ ಹಾಕುತ್ತಿರುವುದು ಕಂಡುಬಂತು.

ಆಗ್ರಹ: ರೈತರ ಹಬ್ಬಗಳಲ್ಲಿ ಒಂದಾಗಿರುವ ಮಕರಸಂಕ್ರಮಣದ ದಿನಗಳಂದ ಕೂಡಲಸಂಗಮದ ಶರಣಮೇಳ ಮತ್ತು ವಿಜಯಪುರದ ಸಿದ್ದೇಶ್ವರ ಜಾತ್ರೆಗಳಿಗೆ ಭೇಟಿ ನೀಡಿದ ರೈತರು ಆಲಮಟ್ಟಿಗೆ ಆಗಮಿಸುತ್ತಾರೆ. ಜಲಸಂಪನ್ಮೂಲ ಹೇರಳವಾಗಿರುವ ಆಲಮಟ್ಟಿಯಲ್ಲಿ ಸರ್ಕಾರ ನೀರು ಮತ್ತು ಮಣ್ಣಿನ ಬಳಕೆ, ಸಾವಯವ ಕೃಷಿ, ಹೈನುಗಾರಿಕೆ, ಜೇನುಸಾಕಾಣಿಕೆ ಹೀಗೆ ರೈತ ಉತ್ಪನ್ನಗಳ ಬಗ್ಗೆ ಅರಿವು ಮೂಡಿಸಲು ರೈತ ಸಮ್ಮೇಳನ ನಡೆಸಬೇಕು ಎಂದು ರಾಯಚೂರಿನ ಸೂಗಪ್ಪ ಚಲವಾದಿ ಆಗ್ರಹಿಸಿದರು.

ಒತ್ತಾಯ: ಏಷ್ಯಾಖಂಡದಲ್ಲಿಯೇ ಬೃಹತ್ ನೀರಾವರಿ ಯೋಜನೆಗಳಲ್ಲಿಯೇ ದ್ವಿತೀಯ ಸ್ಥಾನದಲ್ಲಿರುವ ಕೃಷ್ಣಾ ಮೇಲ್ದಂಡೆ ಯೋಜನೆ ಕೇಂದ್ರಸ್ಥಾನ ಆಲಮಟ್ಟಿಗೆ ಪ್ರತಿ ದಿನ ಉದ್ಯಾನಗಳನ್ನು ವೀಕ್ಷಿಸಲು ಮತ್ತು ಸಾಕ್ಷಾತ್ ಪಾರ್ವತಿ ಅವತಾರವೆಂದೇ ಕರೆಯಲಾಗುತ್ತಿರುವ ಚಂದ್ರಮ್ಮಾದೇವಿ ದೇವಿಯ ದರ್ಶನಕ್ಕೆ ಆಗಮಿಸುವ ಭಕ್ತರು, ಚಂದ್ರಮ್ಮದೇವಿ ದೇವಸ್ಥಾನದ ಬಳಿಯಿರುವ ಸಾಸ್ತ್ರಿ ಸಾಗರ ಜಲಾಶಯದ ಹಿನ್ನೀರು ಪ್ರದೇಶಗಳಲ್ಲಿ ಪವಿತ್ರ ಸ್ನಾನ ಮಾಡುತ್ತಾರೆ. ಇನ್ನು ಯುಗಾದಿ, ದೀಪಾವಳಿಗಳಂತಹ ದಿನಗಳಲ್ಲಿ ರಾಜ್ಯದ ಮತ್ತು ಹೊರರಾಜ್ಯಗಳಿಂದ ಸಾವಿರಾರು ಸಂಖ್ಯೆಯಲ್ಲಿ ಪಲ್ಲಕ್ಕಿ, ಚೌಕಿಗಳನ್ನು ಛತ್ರಿ ಚಾಮರಗಳೊಂದಿಗೆ ಭಕ್ತಾದಿಗಳು ಆಗಮಿಸುತ್ತಾರೆ.

ಹಿನ್ನೀರು ಪ್ರದೇಶಗಳಲ್ಲಿ ಬೃಹತ್ ತಗ್ಗುಗಳು, ಮುಳ್ಳುಕಂಟಿಗಳಿವೆ ಇದರಿಂದ ಭಕ್ತರ ಜೀವಕ್ಕೆ ಹಾನಿಯಾಗಿರುವ ಘಟನೆಗಳು ಹಲವಾರು ಸಂಭವಿಸಿವೆ, ಜೀವಹಾನಿ ತಪ್ಪಿಸಲು ಚಂದ್ರಮ್ಮಾದೇವಿ ದೇವಸ್ಥಾನದ ಬಳಿಯಿರುವ ಹಿನ್ನೀರು ಪ್ರದೇಶದಲ್ಲಿ ಸುಸಜ್ಜಿತ ಸ್ನಾನಘಟ್ಟಿ ನಿರ್ಮಿಸಬೇಕು ಎನ್ನುತ್ತಾರೆ ರಾಜಶೇಖರಯ್ಯ ಹಿರೇಮಠ.



## 25 ಸಾವಿರಕ್ಕೂ ಅಧಿಕ ಪ್ರವಾಸಿಗರು!

ಸಂಕ್ರಾಂತಿಯ ದಿನದಂದು ಸೋಮವಾರ ರಾಕ್ ಉದ್ಯಾನ, ಕೃಷ್ಣಾ, ಲವಕುಶ ಉದ್ಯಾನಗಳಿಗೆ ಸಂಜೆಯವರೆಗೆ 13,262 ಹಿರಿಯರು, 2160 ಕಿರಿಯರು ಭೇಟಿ ನೀಡಿದ್ದು ಅದರಿಂದ 2,87, 365 ರೂ ಸಂಗ್ರಹವಾಗಿದೆ. ಇನ್ನೂ ಸಂಜೆ ಆರಂಭಗೊಳ್ಳುವ ಸಂಗೀತ ಕಾರಂಜಿ ಒಳಗೊಂಡ 77 ಎಕರೆ ಉದ್ಯಾನಗಳ ಸಮುಚ್ಚಯಗಳಿಗೆ ಭೇಟಿ ನೀಡಿದವರ ಮಾಹಿತಿ ದೊರಕಿಲ್ಲ, ಒಟ್ಟಾರೆ 25 ಸಾವಿರಕ್ಕೂ ಅಧಿಕ ಪ್ರವಾಸಿಗರು ಸೋಮವಾರ ಆಲಮಟ್ಟಿಗೆ ಭೇಟಿ ನೀಡಿದ್ದಾರೆ ಎಂದು ಆರ್ ಎಫ್ ಓ ಮಹೇಶ ಪಾಟೀಲ ಹೇಳಿದರು.

# ಜ.27 ರಿಂದ ಜ್ಯೋತಿ ಹೊತ್ತ ರಥಯಾತ್ರೆ



**ಉದಯರಶ್ಮಿ ನ್ಯೂಸ್**

ವಿಜಯಪುರ: ಮೈಸೂರು ರಾಜ್ಯ ಕರ್ನಾಟಕ ಎಂದು ಮರುನಾಮಕರಣವಾಗಿ ಕಳೆದ ನ.2 ಕ್ಕೆ 50 ವರ್ಷ ಪೂರ್ಣಗೊಂಡಿರುವ ಶುಭ ಸಂದರ್ಭದಲ್ಲಿ "ಕರ್ನಾಟಕ ಸಂಭ್ರಮ-50" ರ "ಹೆಸರಾಯಿತು ಕರ್ನಾಟಕ , ಉಸಿರಾಗಲಿ ಕನ್ನಡ" ಎಂಬ ಶೀರ್ಷಿಕೆಯಡಿ ಇದೇ ಜ 27 ರಿಂದ ಫೆ.12 ರವರೆಗೆ ಜಿಲ್ಲೆಯಾದ್ಯಂತ " ಜ್ಯೋತಿ ಹೊತ್ತ ರಥ ಯಾತ್ರೆ" ನಡೆಯಲಿದ್ದು, ಸಂಭ್ರಮದ ಸ್ವಾಗತಕ್ಕೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಕೆಸ್ವಾನ ಸಭಾಂಗಣದಲ್ಲಿ ಮಂಗಳವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ಜ್ಯೋತಿ ರಥಯಾತ್ರೆಗೆ ಸ್ವಾಗತ ಮತ್ತು ಸಂಚಾರಕ್ಕಾಗಿ ಕೈಗೊಳ್ಳಬೇಕಾದ ಸಿದ್ಧತೆಗಳ ಕುರಿತು ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಆಲಮೇಲ ತಾಲೂಕಿನಲ್ಲಿ ಪ್ರವೇಶಿಸಿ ಜಿಲ್ಲೆಯ ಎಲ್ಲ ತಾಲ್ಲೂಕುಗಳ ವಿವಿಧ ಸ್ಥಳಗಳ ಮೂಲಕ ಕನ್ನಡ ನಾಡು ನುಡಿಯ, ಸಾಂಸ್ಕೃತಿಕ ಪರಂಪರೆ, ಇತಿಹಾಸ ಮತ್ತು ಕನ್ನಡದ ಮಹತ್ವವನ್ನು ಸಾರಿ ಹೇಳುವ ವಿಶೇಷ ಜ್ಯೋತಿ ರಥಯಾತ್ರೆ ಇದಾಗಿದ್ದು, ಆಯಾ ತಾಲ್ಲೂಕು ತಹಶೀಲ್ದಾರರು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾ-ರಿಗಳು ಸೇರಿದಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳ ಸಮನ್ವಯತೆದೊಂದಿಗೆ ಈ ಜ್ಯೋತಿ ಯಾತ್ರೆಗೆ ಅದ್ದೂರಿ ಸ್ವಾಗತ- ಸಂಚಾರಕ್ಕೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಈ ಜ್ಯೋತಿ ಯಾತ್ರೆ ಸಂದರ್ಭದಲ್ಲಿ ವಿವಿಧ ಕಲಾ ತಂಡಗಳ ಮತ್ತು ಯಾತ್ರೆಗೆ ಸಂಬಂಧಿಸಿದ ತಾಲ್ಲೂಕುವಾರು ರೂಟ್ ಮ್ಯಾಪ್ ಸಿದ್ಧಪಡಿಸಿ, ವಿವಿಧ ಸ್ಥಳಗಳ ಮೂಲಕ ಜ್ಯೋತಿಯಾತ್ರೆ ಹೋಗುವ ಪಟ್ಟಿಯನ್ನು ಸಿದ್ಧಪಡಿಸಿ ಸಭೆ ನಡೆಸಿ ಯಾವುದೇ ಲೋಪವಾಗದಂತೆ ಎಚ್ಚ-ರಿಕೆ ವಹಿಸಬೇಕು. ಜ್ಯೋತಿಯಾತ್ರೆ ಸಂದರ್ಭದಲ್ಲಿ ಸಂಭ್ರಮದ ಸ್ವಾಗತ, ವಿವಿಧ ಸಾಂಸ್ಕೃತಿಕ, ಐತಿಹಾಸಿಕ, ಸ್ಥಳೀಯ ಕಲೆಗಳ ಪ್ರೋತ್ಸಾಹ ಒಳಗೊಂಡ ಕಾರ್ಯಕ್ರಮಗಳ ಮೂಲಕ ಯಾತ್ರೆ ಸಂಚರಿಸುವಂತೆ ನೋಡಿಕೊಳ್ಳಬೇಕು ಎಂದು ಅವರು ಹೇಳಿದರು.

ರಥಯಾತ್ರೆ ಸ್ವಾಗತ ಕಾರ್ಯಕ್ರಮದಲ್ಲಿ ಸ್ಥಳೀಯ ಶಾಸಕರನ್ನು ಆಹ್ವಾನಿಸಬೇಕು. ಸಾರ್ವಜನಿಕರು, ಜನಪ್ರತಿನಿಧಿಗಳು, ಸಾಹಿತಿಗಳು, ಅಧಿಕಾರಿ ಸಿಬ್ಬಂದಿಗಳು, ಕಲಾವಿದರು, ಕನ್ನಡಪರ ಸಂಘಟನೆಗಳು,ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸುವಂತೆ ನೋಡಿಕೊಳ್ಳಲು ಸಮನ್ವಯತೆಯಿಂದ ಯೋಜನಾ ಬದ್ಧವಾದ ಜ್ಯೋತಿಯಾತ್ರೆಯ ರೂಪುರೇಷೆ ಯೋಜನೆಯನ್ನು ಸಿದ್ಧಪಡಿಸಬೇಕು.

ಕನ್ನಡ ಜ್ಯೋತಿಯನ್ನು ಹೊತ್ತ ರಥಯಾತ್ರೆಯು ಇತಿಹಾಸ, ಕಲೆ, ಸಾಹಿತ್ಯ , ಸಂಸ್ಕೃತಿ, ನಾಡುನುಡಿಗೆ ಸಂಬಂಧಿಸಿದ ಹಾಗೂ ಯುವ ಜನತೆಯಲ್ಲಿ ಕನ್ನಡ-ಕನ್ನಡಿಗ-ಕರ್ನಾಟಕದ ಅರಿವು ಮೂಡಿಸುವ ಕರ್ನಾಟಕ ಸಂಭ್ರಮ -50ರ ಈ ಮಹತ್ವದ ಕನ್ನಡ ಜ್ಯೋತಿ ಯಾತ್ರೆ ಬಸವಕಲ್ಯಾಣದಿಂದ ಆಗಮಿಸಲಿದ್ದು, ಜ.27ರಂದು ಆಲಮೇಲ ತಾಲ್ಲೂಕಿನ ಗಡಿಯಲ್ಲಿ ಸ್ವಾಗತಿಸಿ,ಪಟ್ಟಣ ಹಾಗೂ ಗ್ರಾಮಗಳ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ಯಶಸ್ವಿಗೊಳಿಸಬೇಕು.

ಅದರಂತೆ, ವಿವಿಧ ಹೋಬಳಿ ಹಾಗೂ ಗ್ರಾಮ ಪಂಚಾಯಿತಿಗಳ ಹಾಗೂ ತಾಲ್ಲೂಕಿನ ಗಡಿಭಾಗದ ವರೆಗಿನ ಮಾರ್ಗಗಳ ಮಧ್ಯದಲ್ಲಿ ಗೌರವಯುತವಾಗಿ ಈ ಜ್ಯೋತಿ ಯಾತ್ರೆಗೆ ಬರಮಾಡಿಕೊಳ್ಳುವ ಮತ್ತು ಬೀಳ್ಕೊಡುವ ವ್ಯವಸ್ಥೆ ಮಾಡಬೇಕು. ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಬೇಕು. ಪ್ರತಿ ತಾಲ್ಲೂಕಿನಲ್ಲಿ ಜ್ಯೋತಿಯಾತ್ರೆ ಸಂಚರಿಸುವ ಮಾರ್ಗ ಪಟ್ಟಣ ಹಳ್ಳಿಗಳಲ್ಲಿ ಸ್ವಾಗತ, ಪುಷ್ಪಾರ್ಚನೆ ಮೂಲಕ ಮೆರವಣಿಗೆಗೆ ಕ್ರಮ ಕೈಗೊಳ್ಳಬೇಕು. ಶಿಷ್ಟಾಚಾರದಂತೆ ಭವ್ಯ ಸ್ವಾಗತಕ್ಕೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಎಲ್ಲ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಹಾಗೂ ತಾಲೂಕಿನ ತಹಶೀಲ್ದಾರ, ಕಾರ್ಯ ನಿರ್ವಹಣಾಧಿಕಾರಿಗಳು ಉಪಸ್ಥಿತ-ರಿದ್ದರು.

# ಆನೆಕಾಲು ರೋಗ ನಿರ್ಮೂಲನೆಗೆ ಎಲ್ಲರೂ ಕೈಜೋಡಿಸಿ



**ಉದಯರಶ್ಮಿ ನ್ಯೂಸ್**

ಸಿಂದಗಿ: ಆನೆಕಾಲು ರೋಗ ನಿರ್ಮೂಲನೆ ಮಾಡುವಲ್ಲಿ ಎಲ್ಲಾ ಇಲಾಖೆಗಳ ಜವಾಬ್ದಾರಿ ಬಹಳ ಮುಖ್ಯ ಎಂದು ಆಲಮೇಲ ತಹಶೀಲ್ದಾರ್ ಸುರೇಶ ಚಾವಲರ ಹೇಳಿದರು.

ಪಟ್ಟಣದ ತಾಲೂಕು ಆಡಳಿತ ಸೌಧದಲ್ಲಿ ಜರುಗಿದ ಆನೆಕಾಲು ರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಸಾಮೂಹಿಕ ಔಷಧಿ ನುಂಗಿಸುವ ತಾಲೂಕು ಮಟ್ಟದ ಸಮನ್ವಯ ಸಮಿತಿ ಪೂರ್ವಭಾವಿ ಸಭೆಯಲ್ಲಿ ಕರಪತ್ರ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಆರೋಗ್ಯ ಇಲಾಖೆಯೊಂದಿಗೆ ಎಲ್ಲರೂ ಕೈ ಜೋಡಿಸಿ ತಾಲೂಕನ್ನು ಆನೆಕಾಲು ರೋಗದಿಂದ ಮುಕ್ತಗೊಳಿಸಬೇಕು. ಡಿಇಸಿ ಮಾತ್ರೆಯನ್ನು ಎಲ್ಲಾ ಮುಖ್ಯೋಪಾಧ್ಯಾಯರು ಶಾಲೆಯ ಮಕ್ಕಳಿಗೆ ನುಂಗಿಸುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಕ್ರಮ ವಹಿಸಬೇಕು. ಅಂಗನವಾಡಿ ಕಾರ್ಯಕರ್ತೆಯರು ತಮ್ಮ ಅಂಗನವಾಡಿ ವ್ಯಾಪ್ತಿಯಲ್ಲಿ ಆನೇಕಲ್ ರೋಗದ ಬಗ್ಗೆ ಮಾಹಿತಿ ತಿಳಿಸುವಂತೆ ವಿಶ್ವ ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ತಿಳಿಸಿದರು. ಗ್ರಾಮ ಪಂಚಾಯಿತ್ ಹಾಗೂ ಪುರಸಭೆ ಮಟ್ಟದಲ್ಲಿ ಕಸ ವಿಲೇವಾರಿ ವಾಹನಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಸೂಚಿಸಿದರು.

ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಗ್ರೇಡ್ 2 ತಹಶೀಲ್ದಾರ್ ಆಯ್.ಜೆ.ಬಳಗಾನೂರ ಮಾತನಾಡಿ, ಎಲ್ಲಾ ಹಂತದ ಅಧಿಕಾ-ರಿಗಳು ಈಗಿನಿಂದಲೇ ಸಭೆ, ತಿಳಿವಳಿಕೆ ಶಿಬಿರಗಳನ್ನು ಆಯೋಜಿಸಬೇಕು. ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಸಂಘ ಸಂಸ್ಥೆಯವರು ಆಂದೋಲನ ರೂಪದಲ್ಲಿ ಜಾಗೃತಿ ಮೂಡಿಸಬೇಕು. ರಾಷ್ಟ್ರೀಯ ಆನೆಕಾಲು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಸಾಮೂಹಿಕ ಡಿಇಸಿ ಮಾತ್ರೆ ನುಂಗಿಸುವ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಆನೆಕಾಲು ರೋಗ ಮುಕ್ತ ತಾಲೂಕನ್ನಾಗಿಸೋಣ ಎಂದರು.

ಈ ವೇಳೆ ತಾಲೂಕು ಆರೋಗ್ಯಾಧಿಕಾರಿ ಡಾ. ಎ.ಎ. ಮಾಗಿ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ನಗರ, ಪಟ್ಟಣ, ಗ್ರಾಮೀಣ ಪ್ರದೇಶ ಸೇರಿದಂತೆ ತಾಲೂಕಿನಾದ್ಯಂತ ವ್ಯಾಪಕವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಮನೆ ಮನೆಗೂ ಭೇಟಿ ನೀಡುವ ಮೂಲಕ ಆನೆಕಾಲು ನಿವಾರಣಾ ಮಾತ್ರೆಗಳನ್ನು ಜ.18-ಫೆ.28ವರೆಗೆ ನೀಡಲಾಗುವುದು. ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮೂಲಕ ಹಾಗೂ ಮನೆ ಮನೆಗೂ ತೆರಳಿ ಮಾತ್ರೆ ನುಂಗಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಕಾರಣ ಸಾರ್ವಜನಿಕರು ರೋಗ ನಿವಾರಣೆಗೆ ಸಹಕರಿಸಬೇಕು. ಪ್ರತಿ ಕುಟುಂಬಕ್ಕೂ ಭೇಟಿ ನೀಡಿ ಔಷಧ ನುಂಗಿಸಲು 246 ಮೇಲ್ವಿಚಾರಕರು, 49 ಜನ ತರಬೇತಿ ಹೊಂದಿರುವ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ಈ ವೇಳೆ ಆರೋಗ್ಯ ಶಿಕ್ಷಣಾಧಿಕಾರಿ ಶ್ರೀಹರಿ ಕುಲಕರ್ಣಿ ಮಾತನಾಡಿ, ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿಗಳು ಅಂಗನವಾಡಿಯಲ್ಲಿ 2-6 ವರ್ಷದೊಳಗಿನ ಮಕ್ಕಳಿಗೆ ಅಂಗನವಾಡಿಯಲ್ಲಿ ಮಕ್ಕಳು ಊಟ ಮಾಡಿದ ನಂತರ ಡಿಈಸಿ ಹಾಗೂ ಅಲ್ಬೆಂಡಾರ್ಝೋಲ ಮಾತ್ರೆಯನ್ನು ನುಂಗಿಸಬೇಕು. ಎಲ್ಲರ ಸಹಕಾರದೊಂದಿಗೆ ಔಷಧಿ ನುಂಗಿಸುವ ಕಾರ್ಯಕ್ರಮ ಯಶಸ್ವಿಗೊಳಿಸೋಣ ಎಂದರು.

ಈ ವೇಳೆ ಸಂತೋಷ ಕಾಳಶೆಟ್ಟಿ, ಪುರಸಭೆಯ ನಬಿರಸೂಲ್ ಉಸ್ತಾದ, ಪ್ರಭುಲಿಂಗ ಜಂಗಿನಮಠ, ಮಹಾಲಿಂಗ ಫಕೀರಪೂರ, ವಿರೇಂದ್ರ ಪವಾಡೆ ಸೇರಿದಂತೆ ವಿವಿಧ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ಆಲಮಟ್ಟಿಯಲ್ಲಿ ಜ.20-21 ದಲಿತ ಸಂಘರ್ಷ ಸಮಿತಿ ಅಧ್ಯಯನ ಶಿಬಿರ




**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಕರ್ನಾಟಕ ದಲಿತ ಸಂಘರ್ಷ ಸಮಿತಿಯು ರಾಜ್ಯ ಮಟ್ಟದ ಪದಾಧಿಕಾರಿಗಳ ಅಧ್ಯಯನ ಶಿಬಿರ ಇದೇ ಜ.20, 21 ಎರಡು ದಿನ, ಇಲ್ಲಿಯ ಕರ್ನಾಟಕ ಗಾಂಧಿ ಮಂಜಪ್ಪ ಹರ್ಡೇಕರ ಸಭಾಭವನದಲ್ಲಿ ಜರುಗಲಿದೆ ಎಂದು ಸಂಘಟನೆಯ ಜಿಲ್ಲಾ ಸಂಚಾಲಕ ಅಶೋಕ ಚಲವಾದಿ ತಿಳಿಸಿದರು.

ಮಂಗಳವಾರ, ಈ ಬಗ್ಗೆ ಸುದ್ದಿಗೋಷ್ಠಿ ನಡೆಸಿದ ಅವರು, ಎರಡು ದಿನಗಳ ಕಾಲ ವಿವಿಧ ಗೋಷ್ಠಿಗಳು ನಡೆಯಲಿವೆ ಎಂದರು.

ಜ.20 ರಂದು ಬೆಳಿಗ್ಗೆ 11 ಕ್ಕೆ ಅಧ್ಯಯನ ಶಿಬಿರವನ್ನು ಸಚಿವ ಶಿವಾನಂದ ಪಾಟೀಲ ಉದ್ಘಾಟಿಸುವರು. ಮೈಸೂರಿನ ಜ್ಞಾನ ಪ್ರಕಾಶ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ರಾಜ್ಯ ಸಂಚಾಲಕ ಹೆಣ್ಣೂರು ಶ್ರೀನಿವಾಸ, ರಮೇಶ ಆಸಂಗಿ, ಎಚ್.ಪಿ. ಸುಧಾಮದಾಸ್, ರಾಜು ಅಲಗೂರ, ಶರಣಪ್ಪ ಸುಣಗಾರ, ರಾಜಶೇಖರ ಯಡಹಳ್ಳಿ, ಹಾಸಿಂಪೀರ ವಾಲಿಕಾರ, ವಿಜಯನರಸಿಂಹ, ಸೂಲಿಕಂಟೆ ರಮೇಶ, ಎಸ್.ಎನ್. ಮಲ್ಲಪ್ಪ, ಎಸ್.ವಿಘ್ನೇಷ, ಸತ್ಯ ಭದ್ರಾವತಿ, ಬಸವರಾಜ ಕೌತಾಳ್, ಅಂಬಣ್ಣ ಅರೋಳಿಕರ್ ಆಗಮಿಸಲಿದ್ದಾರೆ.

"ಕರ್ನಾಟಕ ದಲಿತ ಸಂಘರ್ಷ ಸಮಿತಿ ಹುಟ್ಟು ಮತ್ತು ಬೆಳವಣಿಗೆ' ಮೊದಲ ಗೋಷ್ಠಿಯಲ್ಲಿ ಸಿ.ಕೆ. ಮಹೇಶ ವಿಷಯ ಮಂಡಿಸಲಿದ್ದಾರೆ. ಮಲ್ಲೇಶ್ ಸಜ್ಜನ ಅಧ್ಯಕ್ಷತೆ ವಹಿಸಲಿದ್ದು, ಅಶೋಕ ಚಲವಾದಿ ನಿರೂಪಿಸಲಿದ್ದಾರೆ. ಕೆಲವರು ಪ್ರತಿಕ್ರಿಯೆ ವ್ಯಕ್ತಪಡಿಸಲಿದ್ದಾರೆ.

ಮಧ್ಯಾಹ್ನ 2.30 ಕ್ಕೆ ನಡೆಯುವ "ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಸಾಧಕ-ಬಾಧಕಗಳು, ಗುರಿ ಮತ್ತು ಜವಾಬ್ದಾರಿಗಳು' ವಿಷಯದ ಕುರಿತು ಹಿರೇಹಳ್ಳಿ ಮಲ್ಲಿಕಾರ್ಜುನ ವಿಷಯ ಮಂಡಿಸಲಿದ್ದಾರೆ. ಎಸ್. ಎನ್. ಬಳ್ಳಾರಿ ಅಧ್ಯಕ್ಷತೆ ವಹಿಸಲಿದ್ದು, ಗುರುರಾಜ ಸೊರಬ ನಿರೂಪಿಸಲಿದ್ದಾರೆ. ಕೆಲವರು ಪ್ರತಿಕ್ರಿಯೆ ವ್ಯಕ್ತಪಡಿಸಲಿದ್ದಾರೆ.

ಮೂರನೇ ಗೋಷ್ಠಿ "ಮಹಿಳೆಯರ ಸಂರಕ್ಷಕರಾಗಿ ಅಂಬೇಡ್ಕರ್ ಹಾಗೂ ಅಂಬೇಡ್ಕರ್ ಹಾದಿಯಲ್ಲಿ ಮಹಿಳಾ ಸಬಲೀಕರಣದ ಮಾರ್ಗಗಳು' ಕುರಿತು, ಡಾ ಸುಜಾತಾ ಚಲವಾದಿ ವಿಷಯ ಮಂಡಿಸಲಿದ್ದಾರೆ. ರೇಣುಕಾ ಮಾದರ ಅಧ್ಯಕ್ಷತೆ ವಹಿಸಲಿದ್ದು, ಯಶೋಧಾ ಮೇಲಿನಕೇರಿ ನಿರೂಪಿಸಲಿದ್ದಾರೆ. ಹಲವರು ಪ್ರತಿಕ್ರಿಯೆ ವ್ಯಕ್ತಪಡಿಸಲಿದ್ದಾರೆ.

ಜ.21 ರಂದು ಬೆಳಿಗ್ಗೆ 9 ಕ್ಕೆ ನಾಲ್ಕನೇ ಗೋಷ್ಠಿ "ಆರ್ಥಿಕ ತಜ್ಞರಾಗಿ ಅಂಬೇಡ್ಕರ್ ಪರಿಚಯ, ದಲಿತರ ಆರ್ಥಿಕ ಸಬಲೀಕರಣದ ಆಯಾಮಗಳು' ಕುರಿತು ವಿಧಾನ ಪರಿಷತ್ ಸದಸ್ಯ ಎಚ್.ಪಿ. ಸುಧಾಮ್ ದಾಸ್ ವಿಷಯ ಮಂಡಿಸಲಿದ್ದಾರೆ. ಭೀಮಜ್ಯೋತಿ ಶ್ರೀನಿವಾಸ ಅಧ್ಯಕ್ಷತೆ, ಗಣೇಶ ಮೇತ್ರಿ ನಿರೂಪಿಸಲಿದ್ದು, ಕೆಲವರು ಪ್ರತಿಕ್ರಿಯೆ ವ್ಯಕ್ತಪಡಿಸಲಿದ್ದಾರೆ.

ಬೆಳಿಗ್ಗೆ 11.30 ಕ್ಕೆ ಐದನೇ ಗೋಷ್ಠಿ "ಪ್ರಸ್ತುತ ದಲಿತರ ಮುಂದಿರುವ ಸಾಮಾಜಿಕ ಮತ್ತು ರಾಜಕೀಯ ಸವಾಲುಗಳು' ಕುರಿತು ಬಿ. ಗೋಪಾಲ್ ವಿಷಯ ಮಂಡಿಸಲಿದ್ದು, ಮರಿಶ್ ನಾಗಣ್ಣವರ ಅಧ್ಯಕ್ಷತೆ, ವಿನಾಯಕ ಗುಣಸಾಗರ್ ನಿರೂಪಿಸಲಿದ್ದಾರೆ.

ಮಧ್ಯಾಹ್ನ 2.30 ಕ್ಕೆ ನಡೆಯುವ ಸಮಾರೋಪ ಸಮಾರಂಭದಲ್ಲಿ ಸಚಿವ ಆರ್.ಬಿ. ತಿಮ್ಮಾಪುರ, ಹೆಣ್ಣೂರ ಶ್ರೀನಿವಾಸ, ಎಚ್.ಪಿ. ಸುಧಾಮ್ ದಾಸ್, ಬಿ.ಗೋಪಾಲ, ರಾಹುಲ ಕುಬಕಡ್ಡಿ, ಸಿ.ಟಿ. ಕೊಡಬಾಗಿ, ಬಸವಂತ ಗುಣದಾಳ, ಅಭಿಷೇಕ ಚಕ್ರವರ್ತಿ, ಅಡಿವೆಪ್ಪ ಸಾಲಗಲ್, ನಾಗರಾಜ ಲಂಬು, ಡಿ.ಬಿ. ಮುದೂರ ಪಾಲ್ಗೊಳ್ಳಲಿದ್ದಾರೆ ಎಂದು ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಸಂಘಟನಾ ಸಂಚಾಲಕ ಪರಶುರಾಮ ದಿಂಡವಾರ, ಲಕ್ಷ್ಮಣ ಹಾಲ್ಯಾಳ, ಲಕ್ಷ್ಮಣ ಚಲವಾದಿ, ರಮೇಶ ಸಾಗರ, ಭೀಮಪ್ಪ ಮಾದರ, ಆಕಾಶ ಅಮೀನಪ್ಪಗೋಳ ಸೋಮು ಗಣಿ ಮತ್ತೀತರರು ಇದ್ದರು.

## ಕಾವ್ಯರಶ್ಮಿ

– ಶ್ರೀದೇವಿ ಗುಡಿ
("ನಮ್ಮ ಕಥಾ ಅರಮನೆ" ಬರಹಗಾರರು)



### ಉತ್ತರಾಯಣ

ಮನದಲಿ ನೀ ಬಂದು ನಿಂತಾಕ್ಷಣ
ಆರಂಭವು ಬಾಳಲಿ ಉತ್ತರಾಯಣ
ನಿನ್ನೊಲವು ತುಂಬಿರೆ ತನುವ ಕಣಕಣ
ಅನುದಿನವೂ ನನಗೆ ಮಕರ ಸಂಕ್ರಮಣ

ರಂಗೇರಿದೆ ಬಾನಲಿ ಸೂರ್ಯಕಿರಣ
ಎಳ್ಳು ಬೆಲ್ಲಗಳ ಸಮಾಗಮದ ಹೂರಣ
ನಳನಳಿಸುತಿದೆ ಎಲ್ಲೆಲ್ಲೂ ತಳಿರು ತೋರಣ
ಆಗಮಿಸಿ ಮಾಡು ನಿನ್ನ ಪ್ರೀತಿಯ ಅನಾವರಣ

ಮಾಗಿಯ ಚಳಿಗೆ ತನುವ ಕಂಪನ
ಬಿಸಿಯಪ್ಪುಗೆಯನು ಕಾದಿದೆ ಮೈಮನ
ನೀ ಬಳಿ ಬರಲೆಂದು ನೀಡಿರುವೆ ಆಹ್ವಾನ
ಕೇಳಲು ಮುದ ನಮ್ಮ ಮಿಲನದ ಅನುರಣನ



## ಭಾವರಶ್ಮಿ



– ರೂಪಕಲಾ ಎಸ್.ಎನ್ ಭಟ್
("ನಮ್ಮ ಕಥಾ ಅರಮನೆ" ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**


## ಅಮ್ಮಾ

**ಕಥೆ**

ತನ್ನಿಂದ ಎತ್ತರಕ್ಕೆ ಬೆಳೆದು ನಿಂತ ಮಗ, ಹೆತ್ತಮ್ಮ ನ ಜವಾಬ್ದಾರಿ ಹೊತ್ತುಕೊಳ್ಳಬೇಕಾದ ಮಗ, ಕೂಲಿ ನಾಲಿ ಮಾಡಿ ಕೂಡಿಟ್ಟ ಅಲ್ಪ ಸ್ವಲ್ಪ ಹಣವನ್ನು ಕಿತ್ತುಕೊಂಡು ಹೋಗುವಾಗ ಗಿರಿ-ಜಮ್ಮ ನ ಮನಸು ವಿಲ ವಿಲನೇ ಒದ್ದಾಡಿತು..

ದುಡಿದ ಹಣವನ್ನೆಲ್ಲಾ ಕುಡಿತಕ್ಕೆ ಸುರಿಯೋದು ಅಲ್ಲದೇ, ಸ್ನೇಹಿತರಿಗಾಗಿ ಖರ್ಚು ಮಾಡ್ತಾ ಇದ್ದ. ಕೈಯಲ್ಲಿ ಹಣ ಖಾಲಿ ಆದ್ರೇನೆ ಮನೆ ನೆನಪು ಬರೋದು. ಹಣಕ್ಕಾಗಿ ಪೀಡಿಸುತ್ತಿದ್ದ ಮಗನ ವರ್ತನೆ ಗಿರಿಜಮ್ಮ ನ ಹೊಟ್ಟೆ ಉರಿಯುವಂತೆ ಮಾಡುತಿತ್ತು. ಕಷ್ಟ ಪಟ್ಟು ಕೆಲಸ ಮಾಡಿ ಕೂಡಿಟ್ಟ ದುಡ್ಡು ಕೈಯಲ್ಲಿ ನಿಲ್ತಾ ಇರ್ಲಿಲ್ಲ. ಒಂದು ವೇಳೆ ದುಡ್ಡು ಇಲ್ಲ ಅಂದ್ರು ಸಾಲ ತಂದು ಕೊಡು ಅಂತಾನೂ ಕಾಡಿಸಿ ಪೀಡಿಸಿ, ಆತ್ಮಹತ್ಯೆಯ ಬೆದರಿಕೆ ಒಡ್ಡಿ ಹಣ ಕೀಳುತ್ತಿದ್ದ.

ಮದುವೆ ಆಗಿ ಮೂರು ವರ್ಷದಲ್ಲೇ ಗಂಡನ ಕಳ್ಕೊಂಡ ಗಿರಿಜಮ್ಮ ಒಂದು ವರ್ಷದ ಮಗುವಾಗಿದ್ದ ಪ್ರಶಾಂತ್ ನನ್ನು ಬಹಳ ಮುದ್ದಿನಿಂದ ಸಾಕಿದ್ರು. ಅವನ ಮೇಲಿಟ್ಟ ಅತೀವ ಕಾಳಜಿ, ಪ್ರೀತಿಯೇ ಇವತ್ತಿನ ಅವನ ವರ್ತನೆಗೆ ಕಾರಣ ಅನ್ನೋದು ಗಿರಿಜಮ್ಮನಿಗೂ ತಿಳಿದಿತ್ತು. ಕೇಳಿ ಕೇಳಿದಾಗೆಲ್ಲ ದುಡ್ಡು ಕೊಟ್ಟು, ಹೊಟ್ಟೆ ಬಾಯಿ ಕಟ್ಟಿ, ಮಗಾ ಕೇಳಿದನಲ್ಲ ತಂದು ಕೊಟ್ಟ ತಾಯಿಗೆ, ಇಂದು ಅದೇ ಪ್ರೀತಿ ಮುಳ್ಳಾಗಿ ಪರಿಣಮಿಸಿತು. ಕುಡಿದು ತಡ ರಾತ್ರಿ ಮನೆಗೆ ಬಂದರು ಬಾಗಿಲು ತೆಗೆದ ಊಟ ಬಡಿಸಿ ಮಗನ ಆರೈಕೆ ಮಾಡುತಿದ್ದರು. ಇತ್ತೀಚೆಗೆ ಮನೆಯ ನೆನಪೇ ಇಲ್ಲದ ಮಗ. ಕೈ ಕಾಲಿ ಆದಾಗ ಮನೆಯ ಬಾಗಿಲು ಬಡಿಯುತ್ತಿದ್ದನು. ಊರಲ್ಲಿ ಆತನ ಬಗ್ಗೆ ಬಗೆಬಗೆಯ ಕತೆಗಳು ಹುಟ್ಟಿಕೊಂಡವು.



ಸ್ನೇಹಿತನ ಹೆಂಡತಿ ಜೊತೆ, ಪ್ರಶಾಂತ್ ನ ಓಡಾಟ, ಊರಿನ ಜನಗಳ ಎದುರು ಗಿರಿಜಮ್ಮ ತಲೆ ಎತ್ತದಂತೆ ಮಾಡಿತ್ತು.

ಈ ಬಗ್ಗೆ ವಿಚಾರಿಸಿದಾಗ "ಊರಿನವರು ಏನೇ ಹೇಳಲಿ ಅವ್ರು ನಂಗೆ ತಂಗಿ ಇದ್ದ ಹಾಗೆ ಎನ್ನುತಿ-ದ್ದ ಪ್ರಶಾಂತ್ ಆಕೆಯ ಎಲ್ಲ ಬೇಕು ಬೇಡಗಳಿಗೆ ಗಂಡನಿಗಿಂತ ಜಾಸ್ತಿಯೇ ಕಾಳಜಿ ವಹಿಸುತಿರೋದು ಎಲ್ಲರಿಗೂ ತಿಳಿದ ವಿಚಾರ. ಬಟ್ಟೆ, ಮನೆಗೆ ಬೇಕಾದ ದಿನ್ನಿ ಸಾಮಾನು ಎಲ್ಲ ಪ್ರಶಾಂತ್ ನೇ ಕೊಂಡು ಕೊಡುತ್ತಿದ್ದ.

ಹೆತ್ತ ಅಮ್ಮ ನಿಗೆ ನಯ ಪೈಸೆ ಖರ್ಚ್ ಮಾಡದ ಪ್ರಶಾಂತ್ ತನ್ನ ಫ್ರೆಂಡ್ ನ ಸಂಸಾರ ಸಾಕಿ ಸಲಹುತಿದ್ದ.

ಒಂದು ದಿನಾ ಇದ್ದಕ್ಕೆ ಇದ್ದ ಹಾಗೆ ಹೊಟ್ಟೆ ನೋವು ಕಾಣಿಸಿಕೊಂಡು ಆಸ್ಪತ್ರೆ ಸೇರಿದ ಪ್ರಶಾಂತ್, ಆಸ್ಪತ್ರೆ ಬೆಡ್ ನಲ್ಲಿ "ಅಮ್ಮಾ... ಅಮ್ಮಾ "ಎಂದು ನೋವು ತಾಳದೇ ಒದ್ದಾಡಿದ. ಅವ್ನ ಜೊತೆ ಕೆಲಸ ಮಾಡುತ್ತಿದ್ದವರ್ಯಾರೋ ಹಾಸ್ಪಿಟಲ್ ಯಲ್ಲಿ ದಾಖಲಿಸಿ ಗಿರಿ-ಜಮ್ಮನಿಗೆ ವಿಷಯ ತಿಳಿಸಿದ್ದರು. ವಿಷಯ ತಿಳಿದ ಗಿರಿಜಮ್ಮ ಆಸ್ಪತ್ರೆಗೆ ಧಾವಿಸಿ, ಮಗನ ನರಳಾಟ ಕಂಡು ಕಣ್ಣೀರಿಟ್ಟಳು. ಪ್ರಶಾಂತ್ ನನ್ನು ಪರೀಕ್ಷಿಸಿದ ಡಾಕ್ಟರ್ ಹೊಟ್ಟೆಯ ಸ್ಕ್ಯಾನಿಂಗ್ ಮಾಡುವಂತೆ ಹೇಳಿದಾಗ ಗಿರಿಜಮ್ಮ ತನ್ನ ಸೆರಗಿನ ಗಂಟನ್ನು ತೆಗದು ಅದ್ರಲಿ ಇದ್ದ ಚಿಲ್ಲರೆ ಹಣ ನೋಡಿ, "ನನ್ನ ಮಗನನ್ನು ನಾನು ಹೇಗೆ ಬದುಕಿಸಿಕೊಳ್ಳಲಿ "ಎಂದು ತಲೆಗೆ ಕೈ ಹೊತ್ತು ಬಿಕ್ಕಿ ಬಿಕ್ಕಿ ಅಳುತ್ತಾಳೆ.

ಕೂಡಲೇ ಪ್ರಶಾಂತ್ ನ ಸ್ನೇಹಿತ ಇದ್ದಲ್ಲಿಗೆ ಹೋಗಿ, ಪ್ರದೀಪ್ ನ ಹತ್ರ ವಿಷಯ ತಿಳಿಸಿದ ಗಿರಿಜಮ್ಮನಿಗೆ ಸಿಕ್ಕಿದ್ದು



ಅವಮಾನವೆ ಹೊರತು ಎಳ್ಳಷ್ಟೂ ಯಾವ ಪ್ರಯೋಜನವು ಆಗಲಿಲ್ಲ.

"ಎಷ್ಟು ಬೇಡ ಅಂದ್ರು, ಮೂಗಿನ ವರೆಗೆ ಕುಡಿದು, ತೋರಾಡ್ತಾ ಇದ್ದ. ಈಗ ಅನುಭವಿಸಲಿ. ನನ್ನ ಹತ್ರ ಬಿಡಿ ಕಾಸು ಇಲ್ಲ "ಎಂಬ ಉಡಾಫೆ ಮಾತು ಗಿರಿಜಮ್ಮ ನನ್ನು ಇನ್ನಷ್ಟು ದೃತಿ ಗೆಡುವಂತೆ ಮಾಡಿತು.

ತಾನು ಕೂಲಿ ಕೆಲಸ ಮಾಡೋ ಮನೆಯ ಯಜಮಾನನ ಕಾಲು ಹಿಡಿದು ಹಣ ತಂದ ಗಿರಿಜಮ್ಮ ಮಗನ ಹೊಟ್ಟೆ ಯಲ್ಲಿ ಇರೋದು ಕ್ಯಾನ್ಸರ್ ನ ಗಡ್ಡೆ ಎಂದು ತಿಳಿದು ಕಂಗಾಲ್ ಆಗುತ್ತಾಳೆ.

ಆಪರೇಷನ್ ಖರ್ಚು 2 ಲಕ್ಷ ಎಂದಾಗ ಗಿರಿಜಮ್ಮ "ಮಗನನ್ನು ಹೇಗಾದರೂ ಮಾಡಿ ಉಳಿಸಿಕೊಳ್ ಬೇಕು, ನಂಗೆ ಅಂತ ಇರೋದು ಇವ್ನು ಒಬ್ಬನೇ "ಅಂತ ಕಣ್ಣೀರು ಒರೆಸಿಕೊಂಡು ಮೇಲೇಳುತ್ತಾಳೆ. ಮನೆಯಲ್ಲಿ ಯಾವ ಚಿನ್ನವೂ ಇಲ್ಲ. ಮುಂದೇನು ಅನ್ನೋದು ತೋಚದೆ ಇರೋವಾಗ ಆಕೆಗೆ ನೆನಪಾಗಿದ್ದು ತಾನಿದ್ದ ಮನೆ. "ನಾನು ಕೆಲಸ ಮಾಡಿ ಹಣ 2 ಲಕ್ಷ ಹಿಂತಿರಿಗಿಸುವೆ. ಅಲ್ಲಿಯ ವರೆಗೆ ನನ್ನ ಮನೆಯ ಪತ್ರ ಇಟ್ಟುಕೊಂಡು ಹಣ ನೀಡಿ ಯಜಮಾನರೆ "ಎಂದು ಕಾಲಿಗೆ ಬಿದ್ದು ಅಳುತ್ತಾರೆ ಗಿರಿಜಮ್ಮ.

ಆಕೆಯ ಅಳು ನೋಡಲಾಗದೆ ದುಡ್ಡು ಕೊಟ್ಟು ಕಳುಹಿಸುತ್ತಾರೆ. ಕೈಯಲ್ಲಿ 2 ಲಕ್ಷ ದ ನೋಟಿ ನ ಕಟ್ಟು ಕಂಡು "ನನ್ನ ಮಗನ ಬದುಕಿಸಿಕೊಂಡೆ "ಎಂದು ಓಡಿ ಹೋಗಿ ಆಸ್ಪತ್ರೆ ಯಲ್ಲಿ ಹಣ ಕಟ್ಟಿ ಆಪರೇಷನ್ ಗೆ ಸಿದ್ಧತೆ ಮಾಡುತ್ತಾರೆ.ಆಪರೇಷನ್ ಆಗಿ ತೀವ್ರ ನಿಗಾ ಘಟಕ ದಲ್ಲಿ ಪ್ರಶಾಂತ್ ನನ್ನು ನೋಡಲು ತಾಯಿ, ಮಗನ ಬಳಿಗೆ ಹೋಗುತ್ತಾರೆ "ಮಗಾ... ಅನ್ನೋ ಧ್ವನಿ ಕೇಳಿ "ಅಮ್ಮಾ "ಅಂದಾಗ ಆ ಕೂಗಿನಲ್ಲಿ ತನ್ನಿಂದಾದ ತಪ್ಪಿನ ಅರಿವಿತ್ತು, ಮಡುಗಟ್ಟಿದ ನೋವಿತ್ತು. ಪಾಶ್ಚತ್ತಾಪದ ಬೇಗೆಲಿ ಬೇಯಿತಿದ್ದ ಕಣ್ಣೀರಿತ್ತು. ಅಮ್ಮನ ಕೈ ಹಿಡಿದು "ಈ ಪಾಪಿ ಮಗನ ಕ್ಷಮಿಸುವೆ "ಎಂದಾಗ ಗಿರಿಜಮ್ಮ ನಾ ಮನಸ್ಸು ಮರುಗಿತು. ಮಗನ ಎಲ್ಲಾ ತಪ್ಪನ್ನು ಕ್ಷಣಾರ್ದದಲ್ಲಿ ಕ್ಷಮಿಸಿ, ಹಣೆಗೆ ಮುತ್ತಿಕ್ಕಿ ಸಮಾಧಾನ ಪಡಿಸುತ್ತಾಳೆ.. ಆಸ್ಪತ್ರೆಯಿಂದ ಮನೆಗೆ ಬಂದ ಪ್ರಶಾಂತ್ ತನ್ನ ತಾಯಿ ಮಾಡಿದ ಸಾಲವನ್ನು ಕಷ್ಟ ಪಟ್ಟು ತೀರಿಸಿ, ಗಿರಿಜಮ್ಮ ನನ್ನು ತುಂಬಾ ಪ್ರೀತಿ ಯಿಂದ ನೋಡಿಕೊಳ್ಳುತ್ತಾನೆ, ಎಲ್ಲ ಕೆಟ್ಟ ಚಟಗಳನ್ನು ಬಿಟ್ಟು ತಾಯಿಗೆ ಒಳ್ಳೆ ಮಗನಾಗಿ ಬದಲಾಗುತ್ತಾನೆ.